# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 | ಸಂಚಿಕೆ – 35 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ : 10–08–2023 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 | Issue - 35 | Title- Code: KARKAN 28269 | Chitradurga | Date : 10-08-2023 Thursday | Page: 4 | Price: Rs. 2-00



ಒಳ ಪುಟದ ಸುದ್ದಿಗಳು
2 ವಿಕಲಚೇತನರಿಗೆ ವೈದ್ಯಕೀಯ ತಪಾಸಣಾ ಶಿಬಿರ
3 ಮಣಿಪುರ ಹಿಂಸಾಚಾರಕ್ಕೆ ಕೇಂದ್ರ ಸರ್ಕಾರ ಹೊಣೆ
4 ಅಸ್ವಸ್ಥರ ಯೋಗ–ಕ್ಷೇಮ ವಿಚಾರಿಸಿದ ಡಿಸಿ ದಿವ್ಯ ಪ್ರಭು



ಸುದ್ದಿ ಹಾಗೂ ಜಾಹೀರಾತಿಗಾಗಿ ಸಂಪರ್ಕಿಸಿ :
nammajananews@gmail.com
ವಾಟ್ಸ್‌ಅಪ್ ನಂ. 9686622252


# ಬಿಡಾಡಿ ದನಗಳ ಹಾವಳಿ, ಕಣ್ಮುಚ್ಚಿ ಕುಳಿತ ನಗರಸಭೆ
# ವಾಹನ ಸವಾರರ ಅಪಘಾತಕ್ಕೆ ಯಾರು ಹೊಣೆ



ನಗರದ ಮದಕರಿ ನಾಯಕ ವೃತ್ತದ ಮುಖ್ಯ ರಸ್ತೆಯ ಬಿಡಾಡಿ ದನಗಳ ಹಿಂಡು

**ನಮ್ಮ ಜನ ವಿಶೇಷ ವರದಿ**

ಚಿತ್ರದುರ್ಗ: ಕೋಟೆ ನಾಡು ಚಿತ್ರದುರ್ಗ ನಗರದಲ್ಲಿ ಬಿಡಾಡಿ ದನಗಳ ಹಾವಳಿ ಹೆಚ್ಚಿದ್ದು ಪಾದಚಾರಿಗಳು, ದ್ವಿಚಕ್ರ ವಾಹನ ಸವಾರರು, ಶಾಲೆಗೆ ತೆರಳುವ ವಿದ್ಯಾರ್ಥಿಗಳಿಗೆ ನಿತ್ಯ ಈ ಸಮಸ್ಯೆಯಿಂದ ಸಾಕಷ್ಟು ಕಿರಿಕಿರಿ ಅನುಭವಿಸುತ್ತಿದ್ದಾರೆ. ಬಿಡಾಡಿ ದನಗಳಿಗೆ ಕಡಿವಾಣ ಹಾಕಿ ದನಗಳನ್ನು ರಸ್ತಗೆ ಬಿಡುವ ಮಾಲೀಕರ ವಿರುದ್ದ ಕಾನೂನು ಕ್ರಮ ಜರುಗಿಸದೇ ಅಥವಾ ನಗರದಿಂದ ಬೇರೆಡೆ ಸ್ಥಳಾಂತರ ಮಾಡಬೇಕಾದ ನಗರಸಭೆಗೆ ಮಾತ್ರ ನಿದ್ರೆಗೆ ಜಾರಿದ್ದು ಸಮಸ್ಯೆ ದಿನೇ ದಿನೇ ಹೆಚ್ಚಾಗುತ್ತಿದೆ.

ನಗರಸಭೆ ಬಿಡಾಡಿ ದನಗಳ ಸಂಬಂಧಿಸಿದಂತೆ ನಾಮಕಾವಸ್ಥೆಗೆ ನೋಟಿಸ್ ನೀಡತ್ತಾರೆ. ಆದರೆ ದನಗಳ ರಸ್ತೆ ಮಧ್ಯೆಯಲ್ಲಿ ಮಲಗಿದರು ನಗರಸಭೆ ಅವರಿಗೆ ಕಾಣುತ್ತಿಲ್ವ ಎಂಬದು ಮಾತ್ರ ಸೋಜಿಗೆ ತಂದಿದೆ. ಬಿಡಾಡಿ ದನಗಳು ಒಂದಲ್ಲ ಎರಡಲ್ಲ ಹಿಂಡು ಹಿಂಡಾಗಿ ರಸ್ತೆಯ ಮಧ್ಯದಲ್ಲಿಯೇ ಮಲಗುವುದು ಹಾಗೂ ಒಂದಕ್ಕೊಂದು ಹಾಯುತ್ತಾ ರಸ್ತೆಯಲ್ಲೇ ಕಾದಾಡಲು ಪ್ರಾರಂಭಿಸಿದರೆ ಆ ರಸ್ತೆಯಲ್ಲಿ ಸಂಚಾರವೇ ಸಂಪೂರ್ಣ ಸ್ಥಗಿತಗೊಳ್ಳುತ್ತದೆ.

ವಾಹನ ಸವಾರರಿಗೆ ತೊಂದ–ರೆ: ಅವಳಿ ನಗರದಲ್ಲಿರುವ ಬಿಡಾಡಿ ದನಗಳು ಸಾರ್ವಜನಿಕರಿಗೆ ತೊಂದರೆ ಉಂಟು ಮಾಡುವುದು ಒಂದೆಡೆಯಾದರೆ ಇನ್ನು ನಿತ್ಯ ರಸ್ತೆಯಲ್ಲಿ ಸಂಚರಿಸುವ ವಾಹನ ಸವಾರರ ಸ್ಥಿತಿಯಂತೂ ಹೇಳತೀರದಾಗಿದೆ. ರಸ್ತೆಯ ಅಕ್ಕಪಕ್ಕದಲ್ಲಿ ನಿಂತಿರುವ ಬಿಡಾಡಿ ದನಗಳು ವಾಹನಗಳ ಶಬ್ದ ಕೇಳುತ್ತಿದ್ದಂತೆಯೇ ದಿಢೀರ್ ಎದ್ದು ಎಷ್ಟೋ ಬೈಕ್ ಸವಾರರಿಗೆ ಗಾಯದ ನೋವನ್ನು ನೀಡಿವೆ. ಶಬ್ದ ಕೇಳಿದ ತಕ್ಷಣ ರಸ್ತೆಯ ಅಕ್ಕಪಕ್ಕದುದ್ದಕ್ಕೂ ಓಡಾಡುತ್ತವೆ. ಇದರಿಂದಾಗಿ ರಸ್ತೆಯಲ್ಲಿ ಸಂಚರಿಸುವ ಸವಾರರಿಗೆ ತೀವ್ರ ತೊಂದರೆಯನ್ನುಂಟು ಮಾಡಿವೆ. ಇಷ್ಟಾದರೂ ನಗರಸಭೆಯು ಈ ಬಿಡಾಡಿ ದನಗಳ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳದೇ ಇರುವುದು ಜನರ ಅಸಮಾಧಾನಕ್ಕೆ ಕಾರಣವಾಗಿದೆ.

## ಎಲ್ಲೆಲ್ಲಿ ಸಮಸ್ಯೆ

ಈ ಸಮಸ್ಯೆ ಕೇವಲ ಒಂದು ಪ್ರದೇಶದಲ್ಲಿ ಮಾತ್ರವಲ್ಲ, ಪ್ರಮುಖ ಸ್ಥಳಗಳಾದ ಮಹಾತ್ಮಾ ಗಾಂಧಿವೃತ್ತ, ಎಸ್ಬಿಐ ಬ್ಯಾಂಕ್ ಸರ್ಕಲ್, ಶಂಕರ್ ಟ್ಯಾಕೀಸ್ ಮುಂಭಾಗ, ಮದಕರಿ ನಾಯಕ ವೃತ್ತ, ಹಳೆ ವೈಶಾಲಿ, ಬಾಲಕರ ಪದವಿ ಪೂರ್ವ ಕಾಲೇಜು ಮುಂಭಾಗ, ಸ್ಟೇಡಿಯಂ ರಸ್ತೆ, ಚಳ್ಳಕೆರೆ ಗೇಟ್ , ಚಳ್ಳಕೆರೆ ಮದಕರಿ ಪುರ ರಸ್ತೆ, ಹೊಳಲ್ಕೆರೆ ರಸ್ತೆ, ಪ್ರವಾಸಿ ಮಂದಿರ ಮುಂಭಾಗ, ನಗರದ ಎಲ್ಲ ಪ್ರಮುಖ ರಸ್ತೆಗಳು ಇಂದು ಬಿಡಾಡಿ ದನಗಳಿಂದ ತುಂಬಿ ಹೋಗಿದ್ದು, ಜನತೆಗೆ ವಾಹನ ಸಂಚಾರ ಮಾಡುವುದೇ ದುಸ್ತರವಾಗುತ್ತಿದೆ.

**ಫಾಸ್ಟ್ ನ್ಯೂಸ್**

## ಭೀಮಾ ಯೋಜನೆ ಜಾರಿ ನೋಂದಣಿ ಪ್ರಕ್ರಿಯೆ ಆರಂಭ

**ಹೊಸದುರ್ಗ** : ತಾಲ್ಲೂಕಿನಲ್ಲಿ 2023–24ನೇ ಸಾಲಿನ ಮುಂಗಾರು ಹಂಗಾಮುಗಳಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯನ್ನು ಜಾರಿಗೊಳಿಸಿ ಅಧಿಸೂಚಿಸಲಾಗಿದ್ದು, ನೋಂದಣಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ ಎಂದು ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕ ಸಿ.ಎಸ್.ಈಶ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

ಬೆಳೆ ಸಾಲ ಪಡೆದ ಮತ್ತು ಬೆಳೆ ಸಾಲ ಪಡೆಯದ ಆಸಕ್ತ ರೈತರು ಬೆಳೆ ವಿಮೆಗೆ ನೋಂದಣಿ ಮಾಡಲು ನವಣೆ (ಮಳೆಯಾಶ್ರಿತ), ಭತ್ತ (ನೀರಾವರಿ), ರಾಗಿ (ಮಳೆಯಾಶ್ರಿತ), ರಾಗಿ (ನೀರಾವರಿ) ಬೆಳೆಗಳಿಗೆ ಆಗಸ್ಟ್ 16 ರಂದು ಕೊನೆಯ ದಿನಾಂಕವಾಗಿದ್ದು ಆಸಕ್ತ ರೈತ ಬಾಂದವರು ನಿಗಧಿತ ದಿನಾಂಕದೊಳಗೆ ಬೆಳೆ ವಿಮೆಗೆ ನೋಂದಾವಣೆ ಮಾಡಲು ವಿನಂತಿಸಿದೆ.

## ಗೌಡಗೆರೆ ಗ್ರಾ.ಪಂ. ಕಾಂಗ್ರೆಸ್ ತೆಕ್ಕೆಗೆ



**ನಾಯಕನಹಟ್ಟಿ** : ನಾಯಕನಹಟ್ಟಿ ಹೋಬಳಿಯ ಗೌಡಗೆರೆ ಗ್ರಾ.ಪಂ. ಎರಡನೇ ಅವಧಿಗೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಕಾಂಗ್ರೆಸ್ ಬೆಂಬಲಿ ಅಭ್ಯರ್ಥಿ ಮಲ್ಲೂರಹಟ್ಟಿ ಗ್ರಾಮದ ರಾಧಮ್ಮ ಆರ್.ಬೋರಯ್ಯ, ಉಪಾಧ್ಯಕ್ಷರಾಗಿ ಜೋಗಿಹಟ್ಟಿ ಗ್ರಾಮದ ಸಣ್ಣಪ್ಪ ಆಯ್ಕೆಯಾಗಿದ್ದಾರೆ.

16 ಜನ ಸದಸ್ಯರ ಬಲ ಹೊಂದಿರುವ ಗ್ರಾಮ ಪಂಚಾಯತಿಯಲ್ಲಿ ಅಧ್ಯಕ್ಷ ಹುದ್ದೆಗೆ ಸ್ಪರ್ಧಿಸಿದ್ದ ಅದ್ಯಕ್ಷ ರಾಗಿ ಆಯ್ಕೆಯಾದ ರಾಧಮ್ಮಗೆ 9 ಮತಗಳು ಉಪಾಧ್ಯಕ್ಷ ರಾಗಿ ಆಯ್ಕೆಯಾದ ಸಣ್ಣಪ್ಪಗೆ 9 ಮತಗಳು ಪಡೆದು ಗೆಲುವು ಸಾಧಿಸಿದರೆ ಪ್ರತಿ ಸ್ಪರ್ಧಿಗಳಾದ ಬಿಜೆಪಿ ಬೆಂಬಲಿತ ಅಭ್ಯರ್ಥಿ ಮಂಜಮ್ಮ ಡಿಜಿ ಗೋವಿಂದ 7 ಮತಗಳು ಉಪಾಧ್ಯಕ್ಷ ಸ್ಥಾನಕ್ಕೆ ಸ್ಪಧಿಸಿದ್ದ ಅನ್ನಪೂಣೇಶ್ವರಿ 7 ಮತಗಳಿಸಿ ಪರಾಭವಗೊಂಡಿದ್ದಾರೆ.

# ಕವಾಡಿಗರ ಹಟ್ಟಿ ನೀರಿನ ಪರೀಕ್ಷಾ ವರದಿ ಪ್ರಕಟ



ಚಿತ್ರದುರ್ಗ : ಕವಾಡಿಗರ ಹಟ್ಟಿಯಲ್ಲಿ ಜರುಗಿದ ಕಲುಷಿತ ನೀರು ಪ್ರಕರಣಕ್ಕೆ ಸಂಬಂಧಿಸಿದಂತೆ ಉನ್ನತ ಪರೀಕ್ಷೆಗಾಗಿ ಬೆಂಗಳೂರಿನ ಐ.ಎಫ್.ಎ.ಡಿ.ಎಫ್.ಎ.ಸಿ ಪ್ರಯೋಗಾಲಯಕ್ಕೆ ಕಳುಹಿಸಲಾದ ಮೂರು ನೀರಿನ ಮಾದರಿಗಳ ಪರೀಕ್ಷಾ ವರದಿ ಬಂದಿದ್ದು, ಮೂರೂ ನೀರಿನ ಮಾದರಿಗಳಲ್ಲಿ ಯಾವುದೇ ಅಪಾಯಕಾರಿ ರಾಸಾಯನಿಕ ಅಂಶ ಪತ್ತೆಯಾಗಿರುವುದಿಲ್ಲ, ಆದರೆ ಕಾಲರಾ ಗೆ ಕಾರಣವಾಗಬಹುದಾದ ಸೂಕ್ಷ್ಮಾಣು ಜೀವಿಗಳು ಪತ್ತೆಯಾಗಿರುವುದಾಗಿ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಅಧಿಕಾರಿ ಜಿಲ್ಲಾ ಅಂಕಿತ ಅಧಿಕಾರಿ ಡಾ. ಸಿ.ಎಲ್. ಪಾಲಾಕ್ಷ ತಿಳಿಸಿದ್ದಾರೆ.

ಕಲುಷಿತ ಆಹಾರ ಮತ್ತಿತರೆ ಪ್ರಕರಣಗಳ ಸಂದರ್ಭದಲ್ಲಿ ಸಂಗ್ರಹಿಸಲ್ಪಡುವ ಮಾದರಿಗಳನ್ನು ವಿಶ್ಲೇಷಣಾ ಗುಣಗಳನ್ನು ವಿಶ್ಲೇಷಣೆಗೊಳಪಡಿಸಲು ಬೆಂಗಳೂರಿನ ಇನ್ಸ್‌ಟಿಟ್ಯೂಟ್ ಆಫ್ ಅನಾಲಿಸಿಸ್ ಆಫ್ ಡೈರಿ, ಫುಡ್ ಅಂಡ್ ಕಲ್ಚರ್ಸ್, ಲ್ಯಾಬೋರೇಟರೀಸ್, ಪ್ರೈ.ಲಿ., ಇವರಿಗೆ ಕಳುಹಿಸಿಕೊಡಬೇಕು ಎಂಬುದಾಗಿ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ಆಯುಕ್ತರು ಕಳೆದ ಜೂನ್. 06 ರಂದೇ ರಾಜ್ಯದ ಎಲ್ಲ ಜಿಲ್ಲೆಗಳ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ಜಿಲ್ಲಾ ಅಂಕಿತ ಅಧಿಕಾರಿಗಳಿಗೆ ನಿರ್ದೇಶನ ನೀಡಿರುತ್ತದೆ. ಅದರನ್ವಯ ಕವಾಡಿಗರ ಹಟ್ಟಿಯಲ್ಲಿನ ಕಲುಷಿತ ನೀರು ಪ್ರಕರಣಕ್ಕೆ ಸಂಬಂಧಿಸಿದಂತೆ ಮೃತ ಮಹಿಳೆಯ ಮನೆಯಲ್ಲಿ, ಕವಾಡಿಗರ ಹಟ್ಟಿಯ ಓವರ್ ಹೆಡ್ ಟ್ಯಾಂಕ್‌ನ ನೀರು ಮತ್ತು ಕವಾಡಿಗರ ಹಟ್ಟಿಯಲ್ಲಿನ ನಲ್ಲಿ ನೀರಿನ ಮಾದರಿಗಳನ್ನು ಸಂಗ್ರಹಿಸಿ, ಉನ್ನತ ಪರೀಕ್ಷೆಗಾಗಿ ಬೆಂಗಳೂರಿನ ಐ.ಎಫ್.ಎ.ಡಿ.ಎಫ್.ಎ.ಸಿ ಪ್ರಯೋಗಾಲಯಕ್ಕೆ ಕಳುಹಿಸಲಾಗಿತ್ತು. ಇದೀಗ ಈ ಪ್ರಯೋಗಾಲಯದ ಪರೀಕ್ಷಾ ವರದಿ ಬಂದಿದ್ದು, ಅದರನ್ವಯ ಮೃತ ಮಹಿಳೆಯ ಮನೆಯಲ್ಲಿ ಸಂಗ್ರಹಿಸಿದ ನೀರಿನ ಮಾದರಿಯಲ್ಲಿ ವಿಬ್ರಿಯೋ ಕಾಲರಾ, ವಿಬ್ರಿಯೋ ಪ್ಯಾರಾಹೀಮೊಲೈಟಿಕಸ್, ಸಲ್ಫೈಟ್ ಕಡಿಮೆಗೊಳಿಸುವ ಅನೇರೋಬ್ಸ್, ಪಿ. ಎರುಜೀನೋಸಾ ಮುಂತಾದ ರೋಗಾಣುಗಳು ಕಂಡುಬಂದಿವೆ. ಇ.ಕೊಲೈ, ಕೊಲಿಫಾರಂ ಇವು ಗರಿಷ್ಟ ಮಟ್ಟಕ್ಕಿಂತ ಹೆಚ್ಚಾಗಿದ್ದು, ಮಲದ ಕಲುಷಿತವನ್ನು ಸೂಚಿಸುತ್ತವೆ. 37 ಸೆಂಟಿ ಗ್ರೇಡ್‌ನಲ್ಲಿ ಏರೋಬಿಯಲ್ ಸೂಕ್ಷ್ಮಾಣು ಜೀವಿ ಎಣಿಕೆ, 22 ಸೆಂಟಿಗ್ರೇಡ್‌ನಲ್ಲಿ ಏರೋಬಿಯಲ್ ಸೂಕ್ಷ್ಮಾಣು ಜೀವಿ ಎಣಿಕೆ, ಯೀಸ್ಟ್ ಮತ್ತು ಮೋಲ್ಡ್ ಎಣಿಕೆ ಗರಿಷ್ಟ ಮಿತಿಯನ್ನು ಮೀರಿದ್ದು, ಅನೈರ್ಮಲ್ಯ ಅಭ್ಯಾಸಗಳನ್ನು ಸೂಚಿಸುತ್ತದೆ. ಐಎಟಿಎಫ್‌ಎಸಿ ವರದಿಯಂತೆ ರಾಸಾಯನಿಕಗಳು ಒಪ್ಪಿಕೊಳ್ಳುವ/ ಅನುಮತಿಸುವ ಮಟ್ಟದಲ್ಲಿದ್ದು, ರೋಗಾಣು ಫಲಿತಾಂಶದ ವರದಿಯಲ್ಲಿ ಮಲದ ಸೋಂಕನ್ನು ಮತ್ತು ಅನೈರ್ಮಲ್ಯ ಅಭ್ಯಾಸಗಳನ್ನು ಸೂಚಿಸುತ್ತದೆ.

ಟರ್ಬಿಡಿಟ ಗರಿಷ್ಟ ಮಟ್ಟಕ್ಕಿಂತ ಹೆಚ್ಚಾಗಿದೆ. ಐಎಟಿಎಫ್‌ಎಸಿ ವರದಿಯಂತೆ ರಾಸಾಯನಿಕಗಳು ಒಪ್ಪಿಕೊಳ್ಳುವ/ ಅನುಮತಿಸುವ ಮಟ್ಟದಲ್ಲಿದ್ದು, ರೋಗಾಣು ಫಲಿತಾಂಶದ ವರದಿಯಲ್ಲಿ ಮಲದ ಸೋಂಕನ್ನು ಮತ್ತು ಅನೈರ್ಮಲ್ಯ ಅಭ್ಯಾಸಗಳನ್ನು ಸೂಚಿಸುತ್ತದೆ ಎಂದು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಅಧಿಕಾರಿ ಜಿಲ್ಲಾ ಅಂಕಿತ ಅಧಿಕಾರಿ ಡಾ. ಸಿ.ಎಲ್. ಪಾಲಾಕ್ಷ ತಿಳಿಸಿದ್ದಾರೆ.




**ಇಂದಿನ ಚಿನ್ನ ಮತ್ತು ಬೆಳ್ಳಿ ದರಗಳು : 91.6 Kdm- 5540/gm | 85 kdam - 5140/gm | ಬೆಳ್ಳಿ : 67000 / ಕೆಜಿ**

## ಫಾಸ್ಟ್ ನ್ಯೂಸ್

### ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಸರ್ಕಾರ ಆದೇಶ

ಹತ್ತು ಐಎಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಸರ್ಕಾರ ಆದೇಶ ಹೊರಡಿಸಿದೆ. ಮೊಹಮ್ಮದ್ ಮೊಹ್ಸಿನ್ ಅವರನ್ನು ಕಾರ್ಮಿಕ ಇಲಾಖೆಯ ಮುಖ್ಯ ಕಾರ್ಯದರ್ಶಿಯಾಗಿ, ಟಿಹೆಚ್ಎಂ ಕುಮಾರ್ ಅವರನ್ನು ಕೆಎಸ್ಎಸ್ಐಡಿಸಿ ವ್ಯವಸ್ಥಾಪಕ ನಿರ್ದೇಶಕರನ್ನಾಗಿ, ಆರ್.ಸ್ನೇಹಲ್ ಅವರನ್ನು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ನಿರ್ದೇಶಕರನ್ನಾಗಿ, ಪ್ರಭುಲಿಂಗ್ ಕವಲಿಕಟ್ಟಿ ಅವರನ್ನು ಪಶುಸಂಗೋಪನಾ ಇಲಾಖೆ ಆಯುಕ್ತರನ್ನಾಗಿ, ಜಿ.ಲಕ್ಷ್ಮೀಕಾಂತ್ ರೆಡ್ಡಿ ಅವರನ್ನು KUIDFC ಜಂಟಿ ವ್ಯವಸ್ಥಾಪಕ ನಿರ್ದೇಶಕರನ್ನಾಗಿ, ಪಾಂಡೆ ರಾಹುಲ್ ತುಕಾರಾಮ್ ಅವರನ್ನು ರಾಯಚೂರು ಜಿಲ್ಲಾ ಪಂಚಾಯಿತಿ ಸಿಇಒ ಆಗಿ, ಎಸ್.ಜೆ.ಸೋಮಶೇಖರ್ ಅವರನ್ನು ಚಿತ್ರದುರ್ಗ ಜಿಲ್ಲಾ ಪಂಚಾಯಿತಿ ಸಿಇಒ ಆಗಿ, ಎಸ್.ರಾಜಪ್ಪ ಅವರನ್ನು ಕಂದಾಯ ಇಲಾಖೆಯ ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ವಿಭಾಗದ ನಿರ್ದೇಶಕರನ್ನಾಗಿ ವರ್ಗಾವಣೆ ಮಾಡಲಾಗಿದೆ.

### ವಿದ್ಯಾರ್ಥಿ ನಿಲಯ ಪ್ರವೇಶಕ್ಕೆ ಅರ್ಜಿ ಅಹ್ವಾನ

ಪದವಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು 2023-24ನೇ ಸಾಲಿಗೆ ಹೊಸದಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 16 ಕೊನೆಯವಾಗಿದೆ.

ಪೋಷಕರ ವಾರ್ಷಿಕ ಆದಾಯ ರೂ.2.50 ಲಕ್ಷ ಒಳಗಿರುವ ಪ್ರವರ್ಗ-1, ಎಸ್.ಸಿ, ಎಸ್.ಟಿ ಹಾಗೂ ವಾರ್ಷಿಕ ಆದಾಯ ರೂ.1 ಲಕ್ಷದ ಒಳಗಿರುವ ಪ್ರವರ್ಗ-2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು.


ವಿದ್ಯಾರ್ಥಿಗಳು **https://shp.karnataka.gov.in** ವೆಬ್‌ಸೈಟ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದ್ದು, ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಅದೇಶಕ್ಕಾಗಿ ಇಲಾಖೆಯ **https://bcwd.karnataka.gov.in/** ವೆಬ್‌ಸೈಟ್‌ಯನ್ನು ಸಂಪರ್ಕಿಸಬಹುದು, ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ **bcwd.hostels@karnataka.gov.in** ವೆಬ್‌ಸೈಟ್‌ಗೆ ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ ಮತ್ತು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 8050770005 ಗೆ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಎಸ್ಎಸ್ಎಸ್‌ಸಿ ವಿದ್ಯಾರ್ಥಿನಿ ಹೃದಯಾಘಾತದಿಂದ ಸಾವು

**ಚಾಮರಾಜನಗರ :** ಇತ್ತೀಚೆಗೆ ಚಿಕ್ಕ ಮಕ್ಕಳು ಹೃದಯಾಘಾತ ದಿಂದ ಸಾವನ್ನಪ್ಪುತ್ತಿರುವ ಸಂಖ್ಯೆ ಹೆಚ್ಚಾಗುತ್ತಿದೆ. ಅದರಲ್ಲೂ ಕರ್ನಾಟಕದಲ್ಲಿ ಚಿಕ್ಕ ಚಿಕ್ಕ ವಯಸ್ಸಿನಲ್ಲೇ ಹೃದಯಾಘಾತಕ್ಕೆ ಬಲಿಯಾಗುತ್ತಿದ್ದಾರೆ. ನಟ ವಿಜಯ ರಾಘವೇಂದ್ರ ಸ್ಪಂದನಾ ಹೃದಯಾಘಾತದಿಂದ ಸಾವನ್ನಪ್ಪಿದ್ದು, ಚಿಕ್ಕ ವಯಸ್ಸಿನಲ್ಲೇ ಇಹಲೋಕ ಇಹಲೋಕ ತ್ಯಜಿಸಿದಕ್ಕೆ ಇಡೀ ಕರುನಾಡು ಶೋಕಾ ಸಾಗರದಲ್ಲಿ ಮುಳುಗಿದೆ. ಇದರ ಮಧ್ಯೆ ಶಾಲೆಯಲ್ಲಿ ಬೆಳಗ್ಗೆ ರಾಷ್ಟ್ರಗೀತೆ ಹಾಡುವಾಗ ಹೃದಯಾಘಾತದಿಂದ ಎಸ್ಎಸ್ಎಸ್ ಸಿ ವಿದ್ಯಾರ್ಥಿನಿ ಪೆಲಿಸಾ ಮೃತಪಟ್ಟಿದ್ದಾಳೆ. ಚಾಮರಾಜನಗರ ಜಿಲ್ಲೆ ಗುಂಡ್ಲುಪೇಟೆ ತಾಲೂಕಿನಲ್ಲಿ ಈ ಘಟನೆ ನಡೆದಿದೆ. ಇಂದು (ಆಗಸ್ಟ್ 09) ಗುಂಡ್ಲುಪೇಟೆಯ ನಿರ್ಮಲ ಶಾಲೆಯಲ್ಲಿ ರಾಷ್ಟ್ರಗೀತೆ ಹಾಡುವಾಗ ಪೆಲಿಸಾ ಹಠಾತ್ ಕುಸಿದುಬಿದ್ದು ಸಾವನ್ನಪ್ಪಿದ್ದಾಳೆ.

### ದಸರಾ ಗಜಪಡೆಯ ಮೊದಲ ಪಟ್ಟಿಬಿಡುಗಡೆ



**ಮೈಸೂರು :** ನಾಡಹಬ್ಬ ದಸರಾ ಇನ್ನು ಕೆಲವೇ ತಿಂಗಳುಗಳು ಬಾಕಿ ಇದೆ. ಈ ಹಿನ್ನೆಲೆ, ಈಗಿನಿಂದಲೇ ದಸರಾ ಹಬ್ಬಕ್ಕೆ ಮೈಸೂರು ಸಜ್ಜಾಗುತ್ತಿದ್ದು, ಅದರಲ್ಲೂ ದಸರಾದಲ್ಲಿ ಪ್ರಮುಖ ಆಕರ್ಷಣೆ ಎಂದರೆ ಅದು ಜಂಬೂಸವಾರಿ. ಹೀಗಾಗಿ ಈ ಬಾರಿಯೂ ಅದ್ದೂರಿಯಾಗಿ ಜಂಬೂ ಸವಾರಿ ನಡೆಯಲಿದ್ದು, ಇದಕ್ಕಾಗಿ ದಸರಾ ಗಜಪಡೆಯ ಮೊದಲ ಪಟ್ಟಿಯನ್ನು ಇಂದು ಅಂತಿಮಗೊಳಿಸಲಾಗಿದೆ.

ದಸರಾ ಮಹೋತ್ಸವಕ್ಕೆ ಮೈಸೂರಿಗೆ ಆಗಮಿಸುವ ಗಜಪಡೆಯ ಮೊದಲ ಪಟ್ಟಿ ತಯಾರಾಗಿದೆ. ಮೊದಲ ಹಂತದಲ್ಲಿ ಬರುವ 9 ಆನೆಗಳ ಪಟ್ಟಿಯನ್ನು ಅರಣ್ಯಾಧಿಕಾರಿಗಳು ಅಂತಿಮಗೊಳಿಸಿದ್ದಾರೆ. ನಾಗರಹೊಳೆ ಆನೆ ಶಿಬಿರದಿಂದ ಅಭಿಮನ್ಯು, ಭೀಮ, ಮಹೇಂದ್ರ ಆನೆಗಳು, ನಾಗರಹೊಳೆಯ ಬಳ್ಳೆ ಆನೆ ಶಿಬಿರದಿಂದ ಅರ್ಜುನ ಆನೆ, ದುಬಾರೆ ಆನೆ ಶಿಬಿರದಿಂದ ಧನಂಜಯ, ಗೋಪಿ, ವಿಜಯ ಆನೆಗಳು, ಬಂಡೀಪುರದ ರಾಮಪುರ ಶಿಬಿರದಿಂದ ಪಾರ್ಥ ಸಾರಥಿ, ಭೀಮನಕಟ್ಟೆ ಆನೆ ಶಿಬಿರದಿಂದ ವರಲಕ್ಷ್ಮಿ ಆನೆಗಳು ಜಂಬೂಸವಾರಿಯಲ್ಲಿ ಪಾಲ್ಗೊಳ್ಳಲಿವೆ.ಈ ಬಾರಿಯೂ ಕ್ಯಾಪ್ಟನ್ ಅಭಿಮನ್ಯ ಮುಂದಾಳತ್ವದಲ್ಲೇ ಜಂಬೂಸವಾರಿ ನಡೆಯಲಿದ್ದು, ಅಂಬಾರಿ ಅಭಿಮನ್ಯು ಮೈಸೂರು ಅರಮನೆ ಬೀದಿಗಳಲ್ಲಿ ಹೆಜ್ಜೆ ಹಾಕಲಿದೆ. ಉಳಿದ ಆನೆಗಳು ಅಭಿಮನ್ಯಗೆ ಸಾಥ್ ನೀಡಲಿದೆ.

# ಹೃದಯ ತಪಾಸಣೆ ಮಾಡಿಸಿ : ಡಾ.ಮಂಜುನಾಥ್



**ಚಳ್ಳಕೆರೆ :** ಪ್ರಸ್ತುತ ದಿನಗಳಲ್ಲಿ ಪುಟ್ಟ ಮಕ್ಕಳಿಂದ ವಯೋವೃದ್ದರ ತನಕ ಹೃದಯಾಘಾತ ಮತ್ತು ಹೃದಯಸ್ತಂಭನಕ್ಕೆ ಒಳಗಾಗುತ್ತಿರುವವರ ಸಂಖ್ಯೆ ಹೆಚ್ಚುತ್ತಿದೆ. ಈ ಸಮಯದಲ್ಲಿ ಮನುಷ್ಯನ ಪ್ರಾಣವನ್ನು ಕಾಪಾಡುವುದು ಕಷ್ಟವಾಗುತ್ತದೆ, ಆದ್ದರಿಂದ ಹೃದಯ ತಪಾಸಣೆ ಕೈಗೊಳ್ಳುವ ಮೂಲಕ ಪ್ರಾಣ ರಕ್ಷಣೆಗೆ ಎಲ್ಲರೂ ಮುಂದಾಗಬೇಕು ಎಂದು ಚಿತ್ರದುರ್ಗದ ಇಂಡಿಯಾನಾ ಎಸ್‌ಜೆಎಂ ಹಾರ್ಟ್ ಸೆಂಟರ್ ಹೃದಯ ರೋಗ ತಜ್ಞ ಡಾ.ಮಂಜುನಾಥ್ ತಿಳಿಸಿದರು.

ನಗರದ ರೋಟರಿ ಬಾಲಭವನದಲ್ಲಿ ರೋಟರಿ ಕ್ಲಬ್, ಇನ್ನರ್ ವ್ಹೀಲ್ ಕ್ಲಬ್ ಮತ್ತು ಇಂಡಿಯಾನಾ ಎಸ್‌ಜೆಎಂ ಹಾರ್ಟ್ ಸೆಂಟರ್ ಸಂಯುಕ್ತಾಯದಲ್ಲಿ ಹಮ್ಮಿಕೊಂಡಿದ್ದ ಉಚಿತ ಹೃದಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ಕಳೆದ ಹಲವಾರು ವರ್ಷಗಳಿಂದ ನಮ್ಮ ಸಂಸ್ಥೆಯಿಂದ ಜಿಲ್ಲಾ ಕೇಂದ್ರಗಳನ್ನು ಹೊರತು ಪಡಿಸಿ ತಾಲ್ಲೂಕು ಕೇಂದ್ರಗಳಲ್ಲೂ ಉಚಿತ ಹೃದಯ ತಪಾಸಣಾ ಶಿಬಿರಗಳನ್ನು ಕೈಗೊಂಡು ಸಾರ್ವಜನಿಕರಿಗೆ ಆರೋಗ್ಯದ ಬಗ್ಗೆ ಜಾಗೃತಿಯನ್ನು ಮೂಡಿಸಲಾಗುತ್ತಿದೆ ಎಂದರು.

ಡಾ.ಕೆ.ಎಂ.ಜಯಕುಮಾರ್ ಮಾತನಾಡಿ ಸುಮಾರು 40 ವರ್ಷಗಳಿಂದ ರೋಟರಿ ಕ್ಲಬ್ ವತಿಯಿಂದ ಇಂತಹ ಶಿಬಿರ ನಡೆಸುವ ಮೂಲಕ ರೋಟರಿ ಕ್ಲಬ್ ಇಂದು ಎಲ್ಲರ ಮನಗೆದ್ದಿದೆ. ಸಾರ್ವಜನಿಕರು ಯಾವುದೇ ಕಾರಣ-ಕ್ಕೆ ಆರೋಗ್ಯವನ್ನು ನಿರ್ಲಕ್ಷಿಸಬಾರದು. ವಿಶೇಷವಾಗಿ ಸಮಾಜದ ಕಡುಬಡವರು, ಕೂಲಿಕಾರ್ಮಿಕರ ಹಿತದೃಷ್ಟಿಯಿಂದ ಇಂತಹ ಶಿಬಿರಗಳನ್ನು ನಡೆಸಲಾಗುತ್ತಿದೆ.

ಅಧ್ಯಕ್ಷತೆ ವಹಿಸಿದ್ದ ರೋಟರಿ ಕ್ಲಬ್ ಅಧ್ಯಕ್ಷ ಕೆ.ನಾಗೇಶ್ ನಮ್ಮ ಕ್ಲಬ್ ನಿರಂತರವಾಗಿ ಆರೋಗ್ಯ ತಪಾಸಣೆ ಹಮ್ಮಿಕೊಳ್ಳುವ ಮೂಲಕ ಜನರು ಯಾವುದೇ ರೋಗಕ್ಕೆ ಬಲಿಯಾಗದಂತೆ ಎಚ್ಚರಿಕೆ ವಹಿಸಲಾಗುತ್ತಿದೆ. ಇಂದಿನ ಶಿಬಿರದಲ್ಲಿ ಸುಮಾರು 160ಕ್ಕೂ ಹೆಚ್ಚು ಜನರು ಹೃದಯ ತಪಾಸಣೆಗೆ ಒಳಗಾಗಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಬಿ.ತಿಪ್ಪೇಸ್ವಾಮಿ, ಇನ್ನರ್ ವ್ಹೀಲ್ ಕ್ಲಬ್ ಉಪಾಧ್ಯಕ್ಷ ಸುಧಾಪ್ರಹ್ಲಾದ್, ಸುನಿತಾಗೌಡ, ಕಾರ್ಯದರ್ಶಿ ತಿಪ್ಪೇಸ್ವಾಮಿ, ಡಾ.ಎಲ್.ಎಸ್.ವೀರೇಶ್ ಇದ್ದರು.

# ವಿಕಲಚೇತನರಿಗೆ ವೈದ್ಯಕೀಯ ತಪಾಸಣಾ ಶಿಬಿರ

**ಚಿತ್ರದುರ್ಗ :** ಕೇಂದ್ರ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯ ರಾಜ್ಯ ಖಾತೆ ಸಚಿವ ಎ.ನಾರಾಯಣಸ್ವಾಮಿ ನಿರ್ದೇಶನದಂತೆ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಅಲಿಮ್ಕೋ, ಅಲಿಂಕೋ, ಬೆಂಗಳೂರು ಇವರುಗಳ ಸಹಯೋಗದೊಂದಿಗೆ, ಅಡಿಪ್ ಯೋಜನೆಯಡಿ ಆಗಸ್ಟ್ 16 ರಂದು ವಿಕಲಚೇತನರಿಗೆ ವೈದ್ಯಕೀಯ ತಪಾಸಣಾ ಶಿಬಿರ ಹಾಗೂ ಉಚಿತ ಸಾಧನ ಸಲಕರಣೆ ಹಂಚಿಕೆ ಕಾರ್ಯಕ್ರಮವನ್ನು ಚಿತ್ರದುರ್ಗ ನಗರದ ಜಿಲ್ಲಾ ಬಾಲಭವನ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಶಿಬಿರದಲ್ಲಿ ಜಿಲ್ಲೆಯ ವಿವಿಧ ರೀತಿಯ ವಿಕಲಚೇತನರುಗಳಿಗೆ ಅವರುಗಳ ಅಗತ್ಯತೆಗನುಸಾರ ಅವಶ್ಯವಿರುವ ಅಂದರೆ ದೈಹಿಕ ವಿಕಲಚೇತನರಿಗೆ - ಟ್ರೈಸೈಕಲ್, ಗಾಲಿ ಕುರ್ಚಿ, ಊರುಗೋಲು, ಕಂಕಳುದೊಣ್ಣೆ, ಆಗ್ಜಿಲರಿ ಕ್ಲಚ್ಚರ್ಸ್, ಅಡ್ಜಸ್ಟಬಲ್ ವಾಕಿಂಗ್ ಸ್ಟಿಕ್, ರೊಲೇಟರ್, ಕೃತಕ ಕಾಲು, ಕೃತಕ ಪಾದ, ಕ್ಯಾಲಿಫರ್, ಸೆರಬ್ರಲ್ ಪಾಲ್ಸಿ ಮತ್ತು ಭೌದ್ಧಿಕ ವಿಕಲತೆಯುಳ್ಳ ವಿಕಲಚೇತನರಿಗೆ ಸಿ.ಪಿ ವೀಲ್‌ಚೇರ್, ವೀಲ್‌ಚೇರ್, ಹಾಗೂ 100% ದೃಷ್ಟಿದೋಷವುಳ್ಳವರಿಗೆ- ಬ್ರೈಲ್‌ಸ್ಲೇಟ್, ಬ್ರೈಲ್‌ಕಿಟ್, ಬ್ರೈಲ್ ಕೇನ್ ಪೋಲ್ಡಿಂಗ್, ಸ್ಮಾರ್ಟ್‌ಕೇನ್, ಸ್ಮಾರ್ಟ್‌ಫೋನ್, ಹಾಗೂ ಶ್ರವಣದೋಷವುಳ್ಳವರಿಗೆ- ಶ್ರವಣ ಸಾಧನ, ಕುಷ್ಟರೋಗದಿಂದ ಗುಣಮುಖರಾದ ವಿಕಲಚೇತನರಿಗೆ ಎಡಿಎಲ್ ಕಿಟ್, ಸೆಲ್ ಫೋನ್ ಮುಂತಾದ ಸಾಧನ ಸಲಕರಣೆಗಳನ್ನು ಉಚಿತವಾಗಿ ಒದಗಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು, ತಾಲ್ಲೂಕು ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ, ವಿವಿದೊದ್ದೇಶ ಪುನರ್ವಸತಿ ಕಾರ್ಯಕರ್ತರು ಹಾಗೂ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಜಿಲ್ಲಾ ಬಾಲಭವನ ಆವರಣ, ಸ್ಟೇಡಿಯಂ ರಸ್ತೆ, ಚಿತ್ರದುರ್ಗ ದೂರವಾಣಿ ಸಂಖ್ಯೆ 08194-235284 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

# ಸಮಾಜದ ಅಭಿವೃದ್ಧಿಗೆ ಶಿಕ್ಷಣ ಹಾಗೂ ದುಡಿಮೆ



**ಹೊಸದುರ್ಗ :** ಸಮಾಜದ ಅಭಿವೃದ್ಧಿಗೆ ಶಿಕ್ಷಣ ಹಾಗೂ ದುಡಿಮೆ ನಿರಂತರವಾಗಿ ಇರಬೇಕು. ಬೆಳೆಯುವ ಛಲ ನಿಮ್ಮಲ್ಲಿ ಇದ್ದರೆ ಸಾಧನೆ ನಿಮ್ಮ ಬೆನ್ನಿಗಿರುತ್ತದೆ ಎಂದು ಶಾಸಕ ಬಿ.ಜಿ ಗೋವಿಂದಪ್ಪ ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಪಟ್ಟಣದ ರಾಧಾಕೃಷ್ಣ ಕಲ್ಯಾಣ ಮಂಟಪದಲ್ಲಿ ಕಾಡುಗೊಲ್ಲ ನೌಕರರ ಬಳಗದಿಂದ ಆಯೋಜಿಸಲಾಗಿದ್ದ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ಯಲ್ಲಿನ ಕಾಡುಗೊಲ್ಲ ಸಮುದಾಯದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಶಾಸಕರಿಗೆ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪ್ರತಿಭಾ ಪುರಸ್ಕಾರಕ್ಕೆ ಭಾಜರಾದವರು ಎಲ್ಲರಿಗೂ ಮಾದರಿಯಾಗುವಂತೆ ಉನ್ನತ ಅಧ್ಯಯನ ಮೂಲಕ ಸಾಧನೆ ಮಾಡಬೇಕು ಎಲ್ಲರೂ ಸಂಘಟಿತರಾಗಿ ನನ್ನನ್ನು ಸಂಪೂರ್ಣ ಬೆಂಬಲಿಸಿದ್ದೀರಿ. ಈ ಋಣ ತೀರಿಸಲು ಎಂದಿಗೂ ಸಾಧ್ಯವಿಲ್ಲ.

ಕಳೆದ ಬಾರಿ ಶಾಸಕನಾಗಿದ್ದಾಗ 1 ಎಕರೆ ಭೂಮಿ ಕೊಟ್ಟಿದ್ದೇನೆ. ಅದು ಈಗ ಒಂದು ಕೋಟಿ ಬೆಲೆ ಬಾಳುತ್ತದೆ. ಕಾಡುಗೊಲ್ಲರ ಸಮುದಾಯ ಭವನ ನಿರ್ಮಾಣಕ್ಕೆ ಅನುದಾನ ನೀಡಲು ಬದ್ಧನಾಗಿದ್ದೇನೆ ಎಂದು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಕಾಡುಗೊಲ್ಲ ಸಂಘದ ತಾಲೂಕು ಅಧ್ಯಕ್ಷ ಬೇವಿನಹಳ್ಳಿ ರವೀಂದ್ರ ಮಾತನಾಡಿದರು. ಆಹಾರ ಮತ್ತು ನಾಗರೀಕ ಪೂರೈಕೆ ಇಲಾಖೆ ನಿವೃತ್ತ ಜಂಟಿ ಜಂಟಿ ನಿರ್ದೇಶಕ ಡಾ.ರಾಮೇಶ್ವರಪ್ಪ ಉಪನ್ಯಾಸ ನೀಡಿದರು.

ನಿವೃತ್ತ ಡಿಡಿಪಿಐ ರಾಮಪ್ಪ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಮೋಹನ್ ಕುಮಾರ್, ಹಿಂದುಳಿದ ವರ್ಗಗಳ ಆಯೋಗ ಮಾಜಿ ಸದಸ್ಯ ಗುರುಸ್ವಾಮಿ, ಬಿಇಓ ಸೈಯದ್ ಮೋಸಿನ್, ಕೆಪಿಸಿಸಿ ಓಬಿಸಿ ಉಪಾಧ್ಯಕ್ಷ ಮಹೇಶ್, ಸಹಾಯಕ ನಿರ್ದೇಶಕ ಗೋಪಾಲಪ್ಪ, ತಾಲೂಕು ಕ.ಸಾ.ಪ. ಮಾಜಿ ಅಧ್ಯಕ್ಷ ಧನಂಜಯ್, ಜಿಪಂ ಮಾಜಿ ಸದಸ್ಯ ಶಿವಮೂರ್ತಿ, ತಾಪಂ ಮಾಜಿ ಅಧ್ಯ-ಕ್ಷೆ ಪ್ರೇಮ, ಮಾಜಿ ಉಪಾಧ್ಯಕ್ಷೆ ನೇತ್ರಾವತಿ, ಕಾಡುಗೊಲ್ಲ ಸಂಘದ ಅಧ್ಯಕ್ಷ ರವೀಂದ್ರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪದ್ಮನಾಭ್, ಶಿಕ್ಷಕ ಗುತ್ತಿಗಟ್ಟೆ ಪ್ರಕಾಶ್, ಯುವ ಕಾಂಗ್ರೆಸ್ ಅಧ್ಯಕ್ಷ ಯಶವಂತ್ ಗೌಡ, ಮುಖಂಡರಾದ ಕೃಷ್ಣಪ್ಪ, ರಂಗಸ್ವಾಮಿ, ಮೂರ್ತಪ್ಪ, ಶಿಕ್ಷಕ ಧನಂಜಯ ಇದ್ದರು.

# ಪೋಲೀಸರಿಂದ ಬೈಕ್ ಕಳ್ಳನ ಬಂಧನ ಐದು ಬೈಕ್ ಜಪ್ತಿ



**ಹೊಸದುರ್ಗ :** ಪಟ್ಟಣ ಸೇರಿದಂತೆ ಹೊಸದುರ್ಗ ಪೊಲೀಸ್ ಠಾಣಾ ವ್ಯಾಪ್ತಿಯ ಸರಹದ್ದಿನಲ್ಲಿ ರಾತ್ರಿ ಸಮಯದಲ್ಲಿ ಮತ್ತು ದೇವಸ್ಥಾನಗಳ ಬಳಿ ನಿಲ್ಲಿಸಿದ್ದ ಬೈಕ್ ಗಳನ್ನು ಕಳ್ಳತನ ಮಾಡುತ್ತಿದ್ದ ವ್ಯಕ್ತಿಯನ್ನು ಬಂಧಿಸುವಲ್ಲಿ ಇಲ್ಲಿನ ಠಾಣೆಯ ಪೊಲೀಸರು ಯಶಸ್ವಿಯಾಗಿದ್ದಾರೆ.

ಆರೋಪಿಯನ್ನು ಪೊಲೀಸರು ವಿಚಾರಣೆಗೆ ಒಳಪಡಿಸಿದಾಗ 2 ಲಕ್ಷದ 40 ಸಾವಿರ ರೂ. ಬೆಲೆಬಾಳುವ 5 ಬೈಕ್ ಗಳು ಸಿಕ್ಕಿದ್ದು, ಜಪ್ತಿ ಮಾಡಿಕೊಳ್ಳಲಾಗಿದೆ.

ಬೆಂಗಳೂರು ಮೂಲದ ಸೈಯದ್ ತಬ್ರೇಜ್ (25) ಬಂಧಿತ ಆರೋಪಿ. ಈತನನ್ನು ನ್ಯಾಯಾಂಗ ಬಂಧನದಲ್ಲಿ ಇರಿಸಲಾಗಿದೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ. ಪರಶುರಾಮ್ ಮತ್ತು ಹೆಚ್ಚುವರಿ ಪೊಲೀಸ್ ಅಧೀಕ್ಷಕ ಎಸ್.ಜೆ. ಕುಮಾರಸ್ವಾಮಿ ಮಾರ್ಗದರ್ಶನದಲ್ಲಿ ಹಿರಿಯೂರು ಡಿವೈಎಸ್ಪಿ ಚೈತ್ರ ಅವರ ಉಸ್ತುವಾರಿಯಲ್ಲಿ ಪೊಲೀಸ್ ಇನ್ಸ್‌ಪೆಕ್ಟರ್ ಏನ್.ತಿಮ್ಮಣ್ಣ ರವರ ನೇತೃತ್ವದಲ್ಲಿ ಸಬ್ ಇನ್ಸ್‌ಪೆಕ್ಟರ್ ಭೀಮನಗೌಡ ಪಾಟೀಲ್, ಸಿಬ್ಬಂದಿಗಳಾದ ಕುಮಾರ್, ರಾಜಣ್ಣ, ಮಧು, ತಿಪ್ಪೇಸ್ವಾಮಿ ಮತ್ತು ಗಂಗಾಧರ ಇವರ ತಂಡ ಆರೋಪಿಯನ್ನು ಪತ್ತೆ ಹಚ್ಚಿ, ಬಂಧಿಸಿದ್ದಾರೆ. ಈ ಪತ್ತೆ ಕಾರ್ಯವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ. ಪರಶುರಾಮ್ ಶ್ಲಾಘಿಸಿದ್ದಾರೆ.

# ಎನ್.ಮಹದೇವಪುರ ಗ್ರಾ.ಪಂಗೆ ನೂತನ ಅಧ್ಯಕ್ಷರಾಗಿ ಬಿ.ತಿಪ್ಪೇಸ್ವಾಮಿ ಆಯ್ಕೆ



**ನಾಯಕನಹಟ್ಟಿ :** ನಾಯಕನಹಟ್ಟಿ ಹೋಬಳಿಯ ಎನ್.ಮಹದೇವಪುರ ಗ್ರಾಮ ಪಂಚಾಯಿತಿ ಅಧ್ಯಕ್ಷರ ಮತ್ತು ಉಪಾಧ್ಯಕ್ಷರ ಎರಡನೇ ಅವಧಿಯ ಚುನಾವಣೆ ಮಂಗಳವಾರ ನಡೆಯಿತು. ಮೊಳಕಾಲ್ಮೂರು ವಿಧಾನ ಸಭಾ ಕ್ಷೇತ್ರದ ಎನ್.ವೈ.ಗೋಪಾಲಕೃಷ್ಣ ಅವರ ಆಡಳಿತವನ್ನು ಮೆಚ್ಚಿ ಬಿಜೆಪಿ ಬೆಂಬಲಿತ ಅಭ್ಯರ್ಥಿಗಳು ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಯಾದ ಬಿ.ತಿಪ್ಪೇಸ್ವಾಮಿಗೆ ಮತವನ್ನು ಹಾಕಿದರು. ಅಧ್ಯಕ್ಷ ಸ್ಥಾನಕ್ಕೆ ಬಿ.ತಿಪ್ಪೇಸ್ವಾಮಿ, ಎಂ.ಪಾಲಯ್ಯ, ನಾಮಪತ್ರವನ್ನು ಸಲ್ಲಿಸಿದರು. ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ಬಿ.ತಿಪ್ಪೇಸ್ವಾಮಿ 8 ಮತಗಳು, ಬಿಜೆಪಿ ಬೆಂಬಲಿತ ಅಭ್ಯರ್ಥಿ ಎಂ.ಪಾಲಯ್ಯ 4 ಮತಗಳನ್ನು ಪಡೆದು ಹೀನಾಯ ಸೋಲನ್ನು ಅನುಭವಿಸಿದರು. 1 ಮತ ತಿರಸ್ಕೃತವಾಗಿದೆ. ಉಪಾಧ್ಯಕ್ಷ ಸ್ಥಾನಕ್ಕೆ ರೋಹಿಣಿಬಾಯಿ 7 ಮತ, ಶಾಂತಮ್ಮ 6 ಮತಗಳನ್ನು ಪಡೆದು 1 ಮತಗಳ ಅಂತರದಿಂದ ಸೋಲನ್ನು ಅನುಭವಿಸಿದರು.

ಈ ಸಂದರ್ಭದಲ್ಲಿ ನೂತನವಾಗಿ ಅಧ್ಯಕ್ಷರಾದ ಬಿ.ತಿಪ್ಪೇಸ್ವಾಮಿ ಮಾತನಾಡಿ ನಾವು ಜನರ ನಿರೀಕ್ಷೆ ತಕ್ಕಂತೆ ಕೆಲಸ ಮಾಡುತ್ತೇನೆ. ಮತ್ತು ಗ್ರಾಮ ಪಂಚಾಯಿತಿಗೆ ಬರುವ ಎಲ್ಲಾ ಹಳ್ಳಿಗಳಿಗೆ ಅಭಿವೃದ್ಧಿ ಕೆಲಸಗಳನ್ನು ಮಾಡುತ್ತೇನೆ ಎಂದರು.

ಕೆ.ಡಬ್ಲ್ಯೂ.ದಯನಂದಸ್ವಾಮಿ, ಎ.ಇ.ಇ, ಆರ್.ಡಬ್ಲ್ಯೂ.ಎಸ್ ಉಪವಿಭಾಗ ಚಳ್ಳಕೆರೆ ಗ್ರಾಮ ಪಂಚಾಯಿತಿ ಚುನಾವಣೆ ಅಧಿಕಾರವನ್ನು ವಹಿಸಿಕೊಂಡಿದ್ದರು.

ಈ ಸಂದರ್ಭದಲ್ಲಿ ಎನ್.ಮಹದೇವಪುರ ಗ್ರಾಮದ ಕಾಂಗ್ರೆಸ್ ಪಕ್ಷದ ಮುಖಂಡರು ಮತ್ತು ಗ್ರಾಮ ಪಂಚಾಯಿತಿಯ ಸದಸ್ಯರುಗಳು, ಪೊಲೀಸ್ ಇಲಾಖೆಯವರು, ಗ್ರಾಮ ಪಂಚಾಯಿತಿ ಪಿಡಿಓ ರಾಘವೇಂದ್ರ ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಇದ್ದರು.

# ಮಣಿಪುರ ಹಿಂಸಾಚಾರಕ್ಕೆ ಕೇಂದ್ರ ಸರ್ಕಾರ ಹೊಣೆ



**ನವದೆಹಲಿ :** ಕೇಂದ್ರ ಸರ್ಕಾರ ಮಣಿಪುರವನ್ನು ಕೊಲೆ ಮಾಡಿದೆ ಎಂದು ಆಕ್ರೋಶ ವ್ಯಕ್ತಪಡಿಸಿರುವ ಕಾಂಗ್ರೆಸ್ ನಾಯಕ ರಾಹುಲ್‌ಗಾಂಧಿ, ಕೋಮು ದಳ್ಳುರಿಗೆ ಸಿಲುಕಿ ನೂರಾರು ಅಮಾಯಕರ ಸಾವು ಸಂಭವಿಸಿದ್ದರೂ ಇದುವರೆಗೂ ಗುಡ್ಡಗಾಡು ರಾಜ್ಯಕ್ಕೆ ನರೇಂದ್ರಮೋದಿ ಅವರು ಭೇಟಿ ನೀಡಿಲ್ಲ ಎಂದು ಕಿಡಿಕಾರಿದ್ದಾರೆ. ಏಕೆಂದರೆ ಮಣಿಪುರವನ್ನು ಭಾರತದ ಭಾಗವೆಂದು ಮೋದಿ ಪರಿಗಣಿಸಿಲ್ಲ ಎಂದು ತರಾ–ಟೆಗೆ ತೆಗೆದುಕೊಂಡರು. ಈ ಸಂದರ್ಭದಲ್ಲಿ ಇಂಡಿಯಾ ಮೈತ್ರಿಕೂಟ ಹಾಗೂ ಎನ್‌ಡಿಎ ಸದಸ್ಯರ ನಡುವೆ ತೀವ್ರ ಮಾತಿನ ಚಕಮಕಿ ನಡೆದು ಸದನದಲ್ಲಿ ಕೋಲಾಹಲ ಉಂಟಾಯಿತು. ಆಡಳಿತ ಮತ್ತು ಪ್ರತಿಪಕ್ಷದ ಸದಸ್ಯರ ನಡುವೆ ತೀವ್ರ ಮಾತಿನ ಚಕಮಕಿ ನಡೆಯಿತು.

ಕಳೆದ ಮೂರು ತಿಂಗಳಿನಿಂದಲೂ ಮಣಿಪುರದಲ್ಲಿ ಕುಕಿ ಮತ್ತು ಮೈತೇಹಿ ಸಮುದಾಯದ ನಡುವೆ ವ್ಯಾಪಕ ಹಿಂಸಾಚಾರದಲ್ಲಿ 170ಕ್ಕೂಹೆಚ್ಚು ಜನರು ಸಾವನ್ನಪ್ಪಿದ್ದು, ಸಾವಿರಾರು ಜನರು ಗಾಯಗೊಂಡಿದ್ದಾರೆ. ಆದರೆ, ಪ್ರಧಾನಿ ಅವರು ಇದುವರೆಗೂ ಯವುದೇ ಹೇಳಿಕೆ ನೀಡಿಲ್ಲ. ಈ ಹಿನ್ನೆಲೆಯಲ್ಲಿ ಲೋಕಸಭೆಯಲ್ಲಿ ನಿನ್ನೆಯಿಂದ ಚರ್ಚೆ ಆರಂಭವಾಗಿದ್ದು, 2ನೇ ದಿನವಾದ ಇಂದೂ ಮುಂದುವರೆದಿದೆ. ಮೋದಿ ಉಪನಾಮ ಪ್ರಕರಣದಲ್ಲಿ 136 ದಿನಗಳ ಕಾಲ ಲೋಕಸಭಾ ಸದಸ್ಯತ್ವದಿಂದ ಅನರ್ಹಗೊಂಡು ಸುಪ್ರೀಂಕೋರ್ಟ್ ಶಿಕ್ಷೆಗೆ ತಡೆ ನೀಡಿದ್ದ ಹಿನ್ನೆಲೆಯಲ್ಲಿ ಲೋಕಸಭಾ ಸಚಿವಾಲಯ ಅನರ್ಹತೆ ರದ್ದುಗೊಳಿಸಿ ಮತ್ತೆ ಲೋಕಸಭಾ ಸದಸ್ಯತ್ವ ಮರುಸ್ಥಾಪಿಸಿದ ನಂತರ ಇದೇ ಮೊದಲ ಬಾರಿಗೆ ರಾಹುಲ್ ಅವರು ಲೋಕಸಭೆಯಲ್ಲಿ ಇಂಡಿಂ–ಯಾ ಮೈತ್ರಿಕೂಟ ಮಂಡಿಸಿರುವ ಅವಿಶ್ವಾಸ ಗೊತ್ತುವಳಿಯ ಮೇಲೆ ಮಾತನಾಡಿ ಪ್ರಧಾನಿ ಹಾಗೂ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ತಮ್ಮ ಅನರ್ಹತೆ ರದ್ದುಪಡಿಸಿ ಮತ್ತೆ ಸಂಸತ್ ಸದಸ್ಯತ್ವ ನೀಡಿದ್ದಕ್ಕಾಗಿ ಲೋಕಸಭಾ ಸ್ಪೀಕರ್ ಓಂಬಿರ್ಲಾ ಅವರಿಗೆ ರಾಹುಲ್‌ಗಾಂಧಿ ಧನ್ಯವಾದ ಅರ್ಪಿಸಿದರು. ಮಣಿಪುರದಲ್ಲಿ ಭುಗಿಲೆದ್ದಿರುವ ಹಿಂಸಾಚಾರವನ್ನು ಭಾರತೀಯ ಸೇನೆ ಒಂದು ದಿನದಲ್ಲಿ ಶಾಂತಿ ಸ್ಥಾಪನೆ ಬಯಸುತ್ತಿದೆ. ಆದರೆ, ಅದು ಸಾಧ್ಯವಿಲ್ಲ ಎಂದು ಹೇಳಿದರು.

ಮಣಿಪುರವನ್ನು ಕೇಂದ್ರ ಸರ್ಕಾರ ಎರಡು ಭಾಗಗಳನ್ನಾಗಿ ಮಾಡುತ್ತಿದೆ. ಕೆಲವು ದಿನಗಳ ಹಿಂದೆ ತಾವು ಮಣಿಪುರಕ್ಕೆ ಭೇಟಿ ನೀಡಿ ಅಲ್ಲಿನ ವಸ್ತುಸ್ಥಿತಿಯನ್ನು ಪರಿಶೀಲಿಸಿದ್ದೇ ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಹಿಂಸಾಚಾರ ಸಂಭವಿಸಿದ್ದರೂ ಪ್ರಧಾನಿ ಇಲ್ಲಿಯವರೆಗೂ ಭೇಟಿ ಕೊಟ್ಟಿಲ್ಲ. ಪ್ರಧಾನಿ ಅವರು ಕೇವಲ ಮಣಿಪುರ ಮಾತ್ರವಲ್ಲ ಭಾರತವನ್ನೇ ಕೊಂದಿದ್ದಾರೆ. ಅವರ ರಾಜಕೀಯವು ಮಣಿಪುರವನ್ನು ಕೊಂದಿಲ್ಲ. ಆದರೆ ಅದು ಮಣಿಪುರದಲ್ಲಿ ಭಾರತವನ್ನು ಕೊಂದಿದೆ. ನಾನು ಮಣಿಪುರ ಪದ ಬಳಸಿದ್ದೇನೆ, ಅದು ಈಗ ಮಣಿಪುರವಾಗಿ ಉಳಿದಿಲ್ಲ ಎಂಬುದು ಸತ್ಯ ಎಂದು ಹರಿಹಾಯ್ದರು.ನೀವು ರಾಜಸ್ತಾನಕ್ಕೆ ಯಾವಾಗ ಹೋಗುತೀರಿ ಎಂದು ಬಿಜೆಪಿ ಸಂಸದರು ಕೇಳಿದಾಗ ಇಂದು ಹೋಗುತ್ತಿದ್ದೇನೆ ಎಂದು ಹೇಳಿದರು. ಭಾರತ ಒಂದು ಧ್ವನಿ, ಭಾರತ ನಮ್ಮ ಜನರ ಧ್ವನಿ, ಹೃದಯದ ಧ್ವನಿ, ಆ ಧ್ವನಿಯನ್ನು ಮಣಿಪುರದಲ್ಲಿ ನೀವು ಹತ್ಯೆ ಮಾಡಿದ್ದೀರಿ. ಇದರ ಅರ್ಥ ಮಣಿಪುರದಲ್ಲಿ ಭಾರತ ಮಾತೆಯ ಹತ್ಯೆ ಮಾಡಿದ್ದೀರಿ, ಈ ಮೂಲಕ ನೀವು ದೇಶ ಪ್ರೇಮಿಗಳಲ್ಲ, ದೇಶ ದ್ರೋಹಿಗಳು ಎಂದು ರಾಹುಲ್ ಬಿಜೆಪಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಇದೇ ವೇಳೆ ರಾಹುಲ್ ಮಾಡಿದ್ದ ಆರೋಪಗಳಿಗೆ ತಿರುಗೇಟು ನೀಡಿರುವ ಕೇಂದ್ರ ಸಚಿವೆ ಸ್ಮೃತಿ ಇರಾನಿ, ಮಣಿಪುರವನ್ನು ಇಬ್ಭಾಗ ಮಾಡಲಾಗಿದೆ ಎಂಬ ಆರೋಪಕ್ಕೆ ತೀಕ್ಷ್ಣ ಪ್ರತಿಕ್ರಿಯೆ ನೀಡಿದರು. ಈ ವೇಳೆ ಸಂಸತ್‌ನಲ್ಲಿ ಕಾವೇರಿದ ಚರ್ಚೆಗೆ ಕಾರಣವಾಯಿತು. ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಆರೋಪ–ಪ್ರತ್ಯಾರೋಪ ಮೊಳಗಿದವು.

ಗಾಂಧಿ ಕುಟುಂಬ ಕಾಶ್ಮೀರವನ್ನು ಹೇಗೆ ಇಬ್ಭಾಗ ಮಾಡಿತು ಎಂಬ ಬಗ್ಗೆ ರಾಹುಲ್ ಪ್ರತಿಕ್ರಿಯೆ ನೀಡಬೇಕು ಎಂದು ಸವಾಲು ಹಾಕಿದರು. ರಾಹುಲ್ ಅವರೇ ನೀವು ಭಾರತದಲ್ಲಿಲ್ಲ. ದೇಶದಲ್ಲಿ ಭ್ರಷ್ಟಾಚಾರವನ್ನು ಸಮರ್ಥಿಸಿಕೊಳ್ಳುತ್ತೀರಾ ಎಂದು ಖಾರವಾಗಿ ಪ್ರಶ್ನಿಸಿದರು.

**ಭಾರತ್ ಜೋಡೊ ಯಾತ್ರೆ ಮುಗಿದಿಲ್ಲ :** ತಾವು ಕೈಗೊಂಡಿದ್ದ ಭಾರತ್ ಜೋಡೊ ಯಾತ್ರೆ ಮುಗಿದಿಲ್ಲ. ಇನ್ನುಚಾಲನೆಯಲ್ಲಿದೆ ಎಂದು ಕಾಂಗ್ರೆಸ್ ಮಾಜಿ ಅಧ್ಯಕ್ಷ ರಾಹುಲ್‌ಗಾಂಧಿ ಹೇಳಿದರು. ಲೋಕಸಭೆಯಲ್ಲಿಂದು ಅವಿಶ್ವಾಸ ನಿರ್ಣಯದ ಮೇಲೆ ಮಾತನಾಡಿದ ಅವರು, ಕನ್ಯಾಕುಮಾರಿಯಿಂದ ಕಾಶ್ಮೀರದವರೆಗೆ ಕೈಗೊಂಡಿದ್ದ ಭಾರತ್ ಜೋಡೊ ಯಾತ್ರೆಯನ್ನು ಮೆಲುಕು ಹಾಕಿದರು.

ಭಾರತ್ ಜೋಡೊ ಯಾತ್ರೆಯನ್ನು ಏಕೆ ಪ್ರಾರಂಭಿಸಿದ್ದೀರಿಎಂದು ಜನರು ಕೇಳುತ್ತಿದ್ದರು. ನಾನು ಏಕೆ ಯಾತ್ರೆ ಆರಂಭಿಸಿದೆ ಎಂಬುದೇ ನನಗೆ ಗೊತ್ತಿಲ್ಲ. ಆದರೆ, ಯಾತ್ರೆ ವೇಳೆ ಜನರ ನೋವು, ಸಂಕಟ, ಸಮಸ್ಯೆಗಳು ನನ್ನ ಸಮಸ್ಯೆಗಳಾದವು. ಈ ಸಂದರ್ಭದಲ್ಲಿ ನನ್ನಲ್ಲಿದ್ದ ಅಹಂಕಾರ ಭಾವನೆ ಮಾಯವಾಯಿತು. ತಾವು ಪ್ರತಿದಿನ 10 ಕಿ.ಮೀ ಓಡಲು ಸಾಧ್ಯವಾದರೆ 25 ಕಿ.ಮೀ ನಡೆಯುವುದು ದೊಡ್ಡ ವಿಷಯವಲ್ಲ ಎಂಬುದು ತಮ್ಮ ಮನಸ್ಸಿನಲ್ಲಿತ್ತು.ನನ್ನಹೃದಯದಲ್ಲಿ ದುರಹಂಕಾರವಿತ್ತು. ಆದರೆ, ದುರಹಂಕಾರವನ್ನು ಒಂದು ಸೆಕೆಂಡಿನಲ್ಲಿ ಅಳಿಸಿ ಹಾಕುತ್ತದೆ. ಯಾತ್ರೆ ಕೈಗೊಂಡ 2–3 ದಿನಗಳಲ್ಲೆ ಮೊಣಕಾಲಿನಲ್ಲಿ ನೋವು ಕಾಣಿಸಿಕೊಂಡಿತು. ಅದು ಹಳೆಯ ಗಾಯವಾಗಿತ್ತು ಎಂದ ಅವರು, ಭಾರತ ಜನರ ಧ್ವನಿ, ಈ ಧ್ವನಿಗಳನ್ನಾಲಿಸಲು ನಮ್ಮ ಆಸೆಗಳನ್ನು ತ್ಯಾಗ ಮಾಡಬೇಕು ಎಂದು ಹೇಳಿದರು.

ಫಾಸ್ಟ್ ನ್ಯೂಸ್

## ಸ್ಪಂದನಾ ನಿಧನಕ್ಕೆ ಮುಖ್ಯಮಂತ್ರಿಗಳ ಸಂತಾಪ

**ಬೆಂಗಳೂರು :** ಖ್ಯಾತ ಸಿನಿಮಾ ನಟ ವಿಜಯ ರಾಘವೇಂದ್ರ ಅವರ ಪತ್ನಿ ಸ್ಪಂದನಾ ಅವರ ಅಕಾಲಿಕ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಅವರು ಇಂದು ನಟ ವಿಜಯ ರಾಘವೇಂದ್ರ ಅವರ ಪತ್ನಿ ಸ್ಪಂದನಾ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದ ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು.

ಅಪೂರ್ವ ಎಂಬ ಸಿನಿಮಾದಲ್ಲಿ ನಟಿಸಿದ್ದ ಸ್ಪಂದನಾ ಅಕಾಲಿಕ ಮರಣಕ್ಕೆ ತುತ್ತಾಗಿದ್ದಾರೆ. ಬಾಳಿ ಬದುಕಬೇಕಾಗಿದ್ದ ಸ್ಪಂದನಾ ಅವರದು ಸುಂದರ ಕುಟುಂಬ. ಥೈಲ್ಯಾಂಡ್ ದೇಶಕ್ಕೆ ಪ್ರವಾಸಕ್ಕೆಂದು ತೆರಳಿದ್ದ ಸಂದರ್ಭದಲ್ಲಿ ಸ್ಪಂದನಾ ಅವರು ಮೃತಪಟ್ಟಿರುವುದು ನೋವಿನ ಸಂಗತಿ. ಬಿ.ಕೆ.ಶಿವರಾಂ ಹಾಗೂ ವಿಜಯ ರಾಘವೇಂದ್ರ ಕುಟುಂಬಕ್ಕೆ ಸ್ಪಂದನಾ ಅವರ ಸಾವಿನಿಂದ ತುಂಬಲಾರದ ನಷ್ಟವುಂಟಾಗಿದೆ. ಅವರ ಆತ್ಮಕ್ಕೆ ಶಾಂತಿ ದೊ–ರೆಯಲಿ. ಅವರ ಕುಟುಂಬ ಹಾಗೂ ಅಭಿಮಾನಿಗಳಿಗೆ ಅಗಲಿಕೆಯ ದು:ಖವನ್ನು ಭರಿಸುವ ಶಕ್ತಿಯನ್ನು ಭಗವಂತ ನೀಡಲಿ ಎಂದು ಪ್ರಾರ್ಥಿಸುವುದಾಗಿ ಮುಖ್ಯಮಂತ್ರಿಗಳು ತಿಳಿಸಿದರು.

## ದಲಿತ ಕಾಲೋನಿಯ ಸರ್ಕಾರಿ ಶಾಲೆ ಹೆಚ್ಚುವರಿ ಕೊಠಡಿಗಳ ಕೊರತೆ

ನಾಯಕನಹಟ್ಟಿ : ನಾಯಕನಹಟ್ಟಿ ಪಟ್ಟಣದ ಹೃದಯ ಭಾಗದಲ್ಲಿರುವ ದಲಿತ ಕಾಲೋನಿಯ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠ ಶಾಲೆ ಹೆಚ್ಚುವರಿ ಕೊಠಡಿಗಳ ಕೊರತೆ ಇದ್ದು ಸರ್ಕಾರ ಇತ್ತ ಗಮನ ಹರಿಸಬೇಕಿದೆ.

ಈ ಶಾಲೆಯಲ್ಲಿ 4 ಕೊಠಡಿಗಳು ಮಾತ್ರ ಇವೆ. 165 ಮಕ್ಕಳು ಶಾಲೆಯಲ್ಲಿ ವಿದ್ಯಾರ್ಥಿ ವಿದ್ಯಾರ್ಥಿನಿಯರು ಇದ್ದಾರೆ. ಇನ್ನೂ 4 ಕೊಠಡಿಗಳು ನಿರ್ಮಾಣವಾಗಬೇಕಿದೆ. ಶಾಲೆಯಲ್ಲಿ ಹೆಚ್ಚುವರಿ ಕೊಠಡಿಗಳು ಇಲ್ಲದ ಕಾರಣ ಮಕ್ಕಳಿಗೆ ತೊಂದರೆ ಆಗುತ್ತಿದ್ದು ಕೂಡಲೇ ಶಿಕ್ಷಣ ಇಲಾಖೆ ಸರ್ಕಾರದ ಗಮನಕ್ಕೆ ತರುವ ಮೂಲಕ ಹೆಚ್ಚಿನ ಹಣ ನೀಡಿ ನೂತನ ಕೊಠಡಿ ನಿರ್ಮಾಣ ಮಾಡಬೇಕಿದೆ ಎಂಬ ಮಾತು ಜನರಲ್ಲಿ ಕೇಳಿ ಬರಿತ್ತಿದೆ. ಮಕ್ಕಳ ಅಭ್ಯಾಸದ ಹಿತ ದೃಷ್ಟಿಯಿಂದ ಶೀಘ್ರವಾಗಿ ಕೊಠಡಿ ನಿರ್ಮಾಣದ ಕಡೆ ಜಿಲ್ಲಾಡಳಿತ ಮತ್ತು ಶಿಕ್ಷಣ ಇಲಾಖೆ ಹೆಚ್ಚಿನ ಒತ್ತು ನೀಡಲು ಜನರು ಮನವಿ ಮಾಡಿದ್ದಾರೆ.

## ಶಾಲಾ ಸಂಸತ್ ಚುನಾವಣೆ



**ಚಿತ್ರದುರ್ಗ :** ನಗರದ ಸ್ಟೇಡಿಯಂ ರಸ್ತೆಯಲ್ಲಿರುವ ಮಾತೃಶ್ರಿ ಪಬ್ಲಿಕ್ ಸ್ಕೂಲ್‌ನಲ್ಲಿ ಶಾಲಾ ಸಂಸತ್ ಚುನಾವಣೆ ನಡೆಸಲಾಯಿತು.

ರಾಜಕೀಯ ಪ್ರಜ್ಞೆ ಹಾಗೂ ಮತದಾನ ಕುರಿತು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವುದಕ್ಕಾಗಿ ಸಂಸತ್ ಚುನಾವಣೆಯನ್ನು ಹಮ್ಮಿಕೊಳ್ಳಲಾಗಿತ್ತು.

ಶಿಕ್ಷಕಿ ಚಂದನ, ಶಿಕ್ಷಕಿ ಶುಭ ಮತಗಟ್ಟೆ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದರು. ಶಿಕ್ಷಕಿ ಶ್ರೀಮತಿ ಬಿ.ಮನುಜ ಚುನಾವಣಾ ವೀಕ್ಷಕರಾಗಿದ್ದರು.

ಮಾತೃಶ್ರೀ ಪಬ್ಲಿಕ್ ಸ್ಕೂಲ್‌ನ ಕಾರ್ಯದರ್ಶಿ ಡಾ.ವಿ.ಎಲ್.ಪ್ರಶಾಂತ್, ಆಡಳಿತಾಧಿಕಾರಿ ವಿ.ಎಲ್. ಪ್ರವೀಣ್, ಮುಖ್ಯ ಶಿಕ್ಷಕ ಆರ್.ಮಹಂತೇಶ್, ಸಂಯೋಜಕಿ ಶ್ರೀಮತಿ ಲಕ್ಷ್ಮಿ ದೇಸಾಯಿ ಇವರುಗಳು ಚುನಾವಣೆ ಸಿದ್ಧತೆಯನ್ನು ಪರಿಶೀಲಿಸಿದರು.

## ತಂಬಾಕು ನಿಯಂತ್ರಣ ಕಾಯ್ದೆ : ಪ್ರಕರಣ ದಾಖಲು

**ದಾವಣಗೆರೆ :** ನಗರದಲ್ಲಿ ತಂಬಾಕು ನಿಯಂತ್ರಣ ಕಾಯ್ದೆ ಉಲ್ಲಂಘಿಸಿ ತಂಬಾಕು ಉತ್ಪನ್ನ ಮಾರಾಟ ಮಾಡುತ್ತಿದ್ದವರ ಮೇಲೆ ದಾಳಿ ನಡೆಸಿ ಕಾಯ್ದೆ ಉಲ್ಲಂಘನೆಯ 24 ಪ್ರಕರಣಗಳನ್ನು ದಾಖಲಿಸಿ, 3600 ರೂ. ದಂಡ ವಿಧಿಸಲಾಗಿದೆ.

ಪೊಲೀಸ್ ಇಲಾಖೆ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಹಯೋಗದೊಂದಿಗೆ ಬಸವ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಅಧಿಕಾರಿಗಳ ತಂಡ ಬುಧವಾರ(ಆ.9) ಸಿಗರೇಟು ಮತ್ತು ಇತರೆ ತಂಬಾಕು ಉತ್ಪನ್ನ ಮಾರಾಟ ಮಾಡುತ್ತಿದ್ದವರ ಮೇಲೆ ದಾಳಿ ನಡೆಸಿ ನಿಯಮ ಉಲ್ಲಂಘಿಸಿದವರ ಪ್ರಕರಣ ದಾಖಲಿಸಿದೆ. ಕೋಟ್ಪಾ ಕಾಯ್ದೆ–2003 ಕಾಯ್ದೆಯ ಪ್ರಕಾರ ಮುಂದಿನ ದಿನಗಳಲ್ಲಿ ತಂಬಾಕು ವ್ಯಾಪಾರಸ್ಥರಿಗೆ ಪ್ರತ್ಯೇಕ ಪರವಾನಗಿ ನೀಡಲಾಗುವುದು ಎಂದು ಅಧಿಕಾರಿಗಳ ತಂಡ ಸೂಚನೆ ನೀಡಿದೆ.

ದಾಳಿಯಲ್ಲಿ ಬಸವ ನಗರ ಪೊಲೀಸ್ ಠಾಣೆ–ಯ ಸಿಬ್ಬಂದಿಗಳಾದ ಶಿವಪ್ಪ, ಎ.ಎಸ್.ಐ, ಸುರೇಶ್,ಜೆ, ಕೆ.ಗಗನ್, ಪವನ್, ಶ್ರೀಧರಮೂರ್ತಿ, ಮಹಾನಗರ ಪಾಲಿಕೆ, ಮಹಮದ್, ಶಿಕ್ಷಣ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸತೀಶ್ ಕಲಹಾಳ್, ಜಿಲ್ಲಾ ಸಲಹೆಗಾರ, ಕೆ.ಪಿ.ದೇವರಾಜ್, ಸಮಾಜ ಕಾರ್ಯಕರ್ತ ಹಾಜರಿದ್ದರು.

## ದೇಶ ಕಾಯುವ ಸೈನಿಕರನ್ನು ಸ್ಮರಿಸಬೇಕು : ಪಿಡಿಓ ಬಸವರಾಜ್



**ಚಿತ್ರದುರ್ಗ :** ದೇಶಕ್ಕಾಗಿ ಪ್ರಾಣತ್ತಿತ್ತ ಹಾಗೂ ಸೇವೆ ಸಲ್ಲಿಸಿದಂತಹ ಮಾಜಿ ಸೈನಿಕರಿಗೆ ಅಜಾದಿ ಕಾ ಅಮೃತ ಮಹೋತ್ಸವ ಕಾರ್ಯಕ್ರಮದಲ್ಲಿ ಗೌರವಿಸುತ್ತಿರುವುದು ಸಂತಸ ತಂದಿದೆ ಎಂದು ಆಲಘಟ್ಟ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಬಸವರಾಜ್ ತಿಳಿಸಿದರು.

ತಾಲ್ಲೂಕಿನ ಆಲಘಟ್ಟ ಗ್ರಾಮದಲ್ಲಿ ಜಿಲ್ಲಾಡಳಿತ ಜಿಲ್ಲಾ ಪಂಚಾಯಿತಿ, ನೆಹರು ಯುವ ಕೇಂದ್ರ ಹಾಗೂ ಮಡಿಲು ಗ್ರಾಮೀಣ ಮತ್ತು ನಗರ ಅಭಿವೃದ್ಧಿ ಸಂಸ್ಥೆ ವತಿಯಿಂದ ಸರ್ಕಾರಿ ಪ್ರಾಥಮಿಕ ಶಾಲೆ ಆವರಣದಲ್ಲಿ ಅಜಾದಿ ಕಾ ಅಮೃತ ಮಹೋತ್ಸವದ ಕುರಿತು ನಮ್ಮ ಮಣ್ಣು ನಮ್ಮ ದೇಶ ಅಭಿಯಾನದ ಮೂಲಕ ಶಾಲೆ ಆವರಣದಲ್ಲಿ ಸಸಿಗಳನ್ನು ನೆಡುವುದರ ಮೂಲಕ ಕಾರ್ಯಕ್ರಮ ಚಾಲನೆ ನೀಡಿ ಮಾತನಾಡಿದರು.

ಭಾರತ ದೇಶ ಕಲೆ ಸಾಹಿತ್ಯ ಭಾಷೆ ಸಂಸ್ಕೃತಿಯಲ್ಲಿ ತನ್ನದೇ ಆದ ವೈಶಿಷ್ಟ್ಯತೆಯನ್ನು ಹೊಂದಿದೆ ಅದೇ ರೀತಿಯಲ್ಲಿ ಭಾರತಕ್ಕೆ 75ನೇ ವರ್ಷದ ಸಂಭ್ರಮವನ್ನು ಆಚರಣೆ ಮಾಡುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದಿಂದ ಇಲಾಖೆಗಳು ಹಾಗೂ ಸಂಘ ಸಂಸ್ಥೆಗಳ ಮೂಲಕ ಸೈನಿಕರಗಳಿಗೆ ಸನ್ಮಾನಿಸುತಿರುವುದು ವಿಶೇಷವಾಗಿದೆ ಈ ಒಂದು ಕಾರ್ಯಕ್ರಮದ ಅಡಿಯಲ್ಲಿ ಸಸಿಗಳನ್ನು ನೆಡುವುದರ ಮೂಲಕ ಪರಿಸರಕ್ಕೆ ಹೆಚ್ಚಿನ ಮಹತ್ವವನ್ನು ನೀಡಿದೆ ಎಂದು ತಿಳಿಸಿದರು.

ಶಾಲಾ ಆವರಣದಲ್ಲಿ ವಿವಿಧ ಜಾತಿಯ ಗಿಡಗಳನ್ನು ನೀಡಲಾಯಿತು. ದೇಶಕ್ಕಾಗಿ ಸೇವೆ ಸಲ್ಲಿಸಿದಂತಹ ಗ್ರಾಮದ ಮಾಜಿ ಸೈನಿಕರಿಗೆ ಸನ್ಮಾನ ನೆರವೇರಿಸಲಾಯಿತು.

ಪ್ರಾಥಮಿಕ ಶಾಲೆಯ ಪ್ರಭಾರ ಮುಖ್ಯ ಶಿಕ್ಷಕರಾದ ತಿಪ್ಪೇಸ್ವಾಮಿ ಅವರು ಮಾತನಾಡಿ ಭಾರತ ದೇಶವನ್ನು ಸುಭದ್ರವಾಗಿ ಇರಬೇಕಾದರೆ ಸೈನಿಕರ ಪಾತ್ರ ತುಂಬಾ ದೊಡ್ಡದು. ಹಗಲಿರುಳು ಲೆಕ್ಕಿಸದೆ ದೇಶವನ್ನು ಕಾಯುತ್ತಿದ್ದಾರೆ ಅಂತಹ ಸೈನಿಕರನ್ನು ನಾವೆಲ್ಲ ನೆನಪಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ಶೇಖರಪ್ಪ ,ಕುಸುಮ ಮತ್ತು ನೆಹರು ಯುವ ಕೇಂದ್ರದ ಅಧಿಕಾರಿ ಭರತ್ ಮಡಿಲು, ಸಂಸ್ಥೆಯ ಕಾರ್ಯದರ್ಶಿ ಆನಂದ್ ಗ್ರಾಮಸ್ಥರಾದ ಸುಮನ್, ಅಭಿಷೇಕ್,ಸುನಿಲ್, ನಾಗರಾಜ್ ಇದ್ದರು.


## ಜಿಲ್ಲಾಧಿಕಾರಿ ಅಮಾನತು : ಏಕಾಂಗಿ ಧರಣಿ




**ಚಿತ್ರದುರ್ಗ :** ಕವಾಡಿಗರಹಟ್ಟಿಂಯಲ್ಲಿ ಕಲುಷಿತ ನೀರು ಸೇವಿಸಿ ಐವರು ಮೃತಪಟ್ಟಿದ್ದು, ಇನ್ನೂರಕ್ಕೂ ಹೆಚ್ಚು ಮಂದಿ ಅಸ್ವಸ್ಥರಾಗಿ ಜಿಲ್ಲಾ ಸರ್ಕಾರಿ ಆಸ್ಪತ್ರೆ ಹಾಗೂ ಬಸವೇಶ್ವರ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು ಇದ–ಕ್ಕೆ ಜಿಲ್ಲಾಡಳಿತವೇ ನೇರ ಹೊಣೆಯಾಗಿರುವುದರಿಂದ ಜಿಲ್ಲಾಧಿಕಾರಿಯನ್ನು ಕೂಡಲೆ ಅಮಾನತ್ತುಗೊಳಿಸುವಂತೆ ಒತ್ತಾಯಿಸಿ ಕರ್ನಾಟಕ ಕೊಳಗೇರಿ ನಿವಾಸಿಗಳ ಸಂಯುಕ್ತ ಸಂಘಟನೆ ಜಿಲ್ಲಾಧ್ಯಕ್ಷ ಗಣೇಶ್ ಜಿಲ್ಲಾಧಿಕಾರಿ ಕಚೇರಿ ಎದುರು ಏಕಾಂಗಿಯಾಗಿ ಧರಣಿ ನಡೆಸಿ ಮಂಗಳವಾರ ಜಿಲ್ಲಾಡಳಿತದ ಮೂಲಕ ರಾಜ್ಯದ ಮುಖ್ಯಮಂತ್ರಿಗೆ ಮನವಿ ಸಲ್ಲಿಸಿದರು.

ಪ್ರಕರಣ ಕುರಿತು ತನಿಖೆ ಕೈಗೊಂಡು ಸತ್ಯಾಂಶವನ್ನು ಬಯಲಿಗೆಳೆಯಬೇಕು. ಮೃತ ಕುಟುಂಬಗಳಿಗೆ ಹೆಚ್ಚಿನ ಪರಿಹಾರ ನೀಡಿ ಕುಟುಂಬದಲ್ಲಿ ಒಬ್ಬರಿಗೆ ಸರ್ಕಾರಿ ನೌಕರಿ ನೀಡಬೇಕಲ್ಲದೆ ಆಸ್ಪತ್ರೆಯಲ್ಲಿ ಇರುವವರಿಗೆ ಸಂಪೂರ್ಣವಾಗಿ ಚಿಕಿತ್ಸೆ ವೆಚ್ಚವನ್ನು ಸರ್ಕಾರವೇ ಭರಿಸಬೇಕು. ನಗರದಲ್ಲಿ ಹಲವು ಕಡೆ ಚರಂಡಿಗಳು ಭರ್ತಿಯಾಗಿದ್ದು, ಸೊಳ್ಳೆಗಳ ತಾಣವಾಗಿರುವುದರಿಂದ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆಗಳಿವೆ. ತಿಂಗಳಿಗೊಮ್ಮೆಯಾದರೂ ಸ್ವಚ್ಚಗೊಳಿಸಬೇಕೆಂದು ಗಣೇಶ್ ಒತ್ತಾಯಿಸಿದರು.

## ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ



**ಮೆದೆಹಳ್ಳಿ ಗ್ರಾಪಂ ಅಧ್ಯಕ್ಷರಾಗಿ ಎಂ.ಜಿ.ಜಯರಾಮರೆಡ್ಡಿ, ಉಪಾಧ್ಯಕ್ಷೆಯಾಗಿ ಬಿ.ಆರ್.ಲೀಲಾವತಿ ಶಿವಮೂರ್ತಿ ಆಯ್ಕೆ.**

**ಚಿತ್ರದುರ್ಗ :** ಮೆದೆಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿ ಎಂ.ಜಿ.ಜಯರಾಮರೆಡ್ಡಿ, ಉಪಾಧ್ಯಕ್ಷೆಯಾಗಿ ಬಿ.ಆರ್.ಲೀಲಾವತಿ ಶಿವಮೂರ್ತಿ ಇವರುಗಳು ಆಯ್ಕೆಯಾಗಿದ್ದಾರೆ.

ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ್ದ ಎಂ.ಜಿ.ಜಯರಾಮರೆಡ್ಡಿ 12 ಮತಗಳನ್ನು ಪಡೆದು ಜಯಶಾಲಿಯಾದರೆ ಎದುರಾಳಿ ಆರ್.ನಿರಂಜನ್ 9 ಮತಗಳನ್ನು ಪಡೆದು ಪರಾಭವಗೊಂಡರು.

ಉಪಾಧ್ಯಕ್ಷ ಸ್ಥಾನಕ್ಕೆ ಬಿ.ಆರ್.ಲೀಲಾವತಿ ಶಿವಮೂರ್ತಿ ಒಬ್ಬರೆ ನಾಮಪತ್ರ ಸಲ್ಲಿಸಿದ್ದರಿಂದ ಅವಿರೋಧವಾಗಿ ಆಯ್ಕೆಯಾದರು.

ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಹನುಮಂತಪ್ಪ ಚುನಾವಣಾಧಿಕಾರಿಯಾಗಿ ಅಧ್ಯಕ್ಷ–ಉಪಾಧ್ಯಕ್ಷರ ಆಯ್ಕೆಯನ್ನು ಘೋಷಿಸಿದರು.

## ಗ್ರಾ.ಪಂ. ಅಧ್ಯಕ್ಷ, ಉಪಾಧ್ಯಕ್ಷರಾಗಿ ಅವಿರೋಧ ಆಯ್ಕೆ

**ಚಳ್ಳಕೆರೆ:** ತಾಲ್ಲೂಕಿನ ಕಾಲುವೇಹಳ್ಳಿ ಗ್ರಾಮ ಪಂಚಾಯಿತಿಯ ಎರಡನೇ ಅವಧಿಯ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆಯಾಗಿ ಚುನಾವಣೆ ನಡೆದಿದ್ದು, ಎಲ್ಲಾ ಸದಸ್ಯರು ಸೇರಿ ಸರ್ವಾನುಮತದಿಂದ ಅಧ್ಯಕ್ಷರಾಗಿ ದ್ರಾಕ್ಷಾಯಿಣಿ ಗಾದ್ರಿಪಾಲಯ್ಯ, ಉಪಾಧ್ಯಕ್ಷರಾಗಿ ಮುಕ್ಕಣ್ಣನವರು ಆಯ್ಕೆಯಾದರು ಎಂದು ಚುನಾವಣಾಧಿಕಾರಿ, ತೋಟಗಾರಿ–ಕೆ ಇಲಾಖೆ ಹಿರಿಯ ಅಧಿಕಾರಿ ವಿರೂಪಾಕ್ಷಪ್ಪ ತಿಳಿಸಿದ್ದಾರೆ.

ಕಾಲುವೇಹಳ್ಳಿ ಗ್ರಾಮ ಪಂಚಾಯಿತಿ ಸಭಾಂಗಣದಲ್ಲಿ ಮಂಗಳಾವರ ಚುನಾವಣೆ ನಡೆದಿದ್ದು, ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಹಿನ್ನೆಲೆಯಲ್ಲಿ ಎಲ್ಲಾ ಸದಸ್ಯರು ಒಮ್ಮತದಿಂದ ಅಧ್ಯಕ್ಷರು, ಉಪಾಧ್ಯಕ್ಷರನ್ನು ಆಯ್ಕೆ ಮಾಡಿರುತ್ತಾರೆ.

ಬಿಜೆಪಿ ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಪಿ.ಪಾಲಯ್ಯ ಮಾತನಾಡಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಭಿವೃದ್ಧಿ ದೃಷ್ಠಿಯಿಂದ ಎಲ್ಲಾ ಸದಸ್ಯರು ಸೇರಿ ಅಧ್ಯಕ್ಷರು, ಉಪಾಧ್ಯಕ್ಷರ ಆಯ್ಕೆಯನ್ನು ಅವಿರೋಧವಾಗಿ ಮಾಡಿದ್ದು, ಯಾವುದೇ ಗೊಂದಲವಿಲ್ಲದೆ ನಡೆದಿದೆ. ಇದೇ ಸಂದರ್ಭದಲ್ಲಿ ನೂತನ ಅಧ್ಯಕ್ಷರು, ಗ್ರಾಮ ಪಂಚಾಯಿತಿಯ ಅಭಿವೃದ್ಧಿಪರ ಚಿಂತನೆಗಳಿಗೆ ಕೈಜೋಡಿಸಿದ ಎಲ್ಲಾ ಚುನಾಯಿತ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕಾರ್ಯನಿರ್ವಹಿಸುವ ಭರವಸೆ ನೀಡಿದರು.

ಗ್ರಾಮ ಪಂಚಾಯಿತಿ ಸದಸ್ಯರಾದ ಜಂಪಣ್ಣ, ತ್ರಿವೇಣಿ, ಗಂಗಮ್ಮ, ಲಕ್ಷ್ಮಿದೇವಿ, ಬೊಮ್ಮಜ್ಜ, ಗಾದ್ರಿಪಾಲಯ್ಯ, ಪಿಡಿಒ ರಜನಿಕಾಂತ್ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದರು.



**ಚಳ್ಳಕೆರೆ ತಾಲ್ಲೂಕಿನ ಕಾಲುವೇಹಳ್ಳಿ ಗ್ರಾಮದ ಗ್ರಾಮ ಪಂಚಾಯಿತಿ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ ನಡೆಯಿತು.**

## ಫಾಸ್ಟ್ ನ್ಯೂಸ್

### ಕುಮಾರಸ್ವಾಮಿ ವಿರುದ್ಧ ಎಂ.ಸಿ.ಸುಧಾಕರ್ ವಾಗ್ದಾಳಿ

ಸರ್ಕಾರದ ವಿರುದ್ಧ ಮಾಜಿ ಸಿಎಂ ಕುಮಾರಸ್ವಾಮಿ ಟ್ವೀಟ್ ವಿಚಾರವಾಗಿ ವಾಗ್ದಾಳಿ ನಡೆಸಿದ ಸಚಿವ ಎಂ.ಸಿ.ಸುಧಾಕರ್, ಹೆಚ್.ಡಿ.ಕುಮಾರಸ್ವಾಮಿ ಸಮ್ಮಿಶ್ರ ಸರ್ಕಾರದ ಆಸೆ ಇಟ್ಟು–ಕೊಂಡಿದ್ದರು. ಯಾರೇ ಸರ್ಕಾರ ಮಾಡಿದರೂ ಮನೆಬಾಗಿಲಿಗೆ ಬರಬೇಕೆಂಬ ಆಸೆ ಇತ್ತು. ಆಸೆ ನೆರವೇರಲಿಲ್ಲ ಅಂತಾ ಹೆಚ್.ಡಿ.ಕುಮಾರಸ್ವಾಮಿ ಬೇಸರದಲ್ಲಿದ್ದಾರೆ. ಬೇಸರದಲ್ಲೇ ತಾನು ಅಸ್ತಿತ್ವದಲ್ಲಿದ್ದೇನೆ ಅಂತಾ ತೋರಿಸಿಕೊಳ್ಳುತ್ತಿದ್ದಾರೆ. ಹಾಗಾಗಿ ಕುಮಾರಸ್ವಾಮಿ ದಿನಕ್ಕೊಂದು ರೀತಿ ಹೇಳಿಕೆ ಕೊಡುತ್ತಿದ್ದಾರೆ. ಕುಮಾರಸ್ವಾಮಿ ಸಿಂಗಾಪುರದಿಂದ ಬಂದು ಒಂದು ಹೇಳಿಕೆ ಕೊಟ್ಟಿದ್ದರು. ಈಗ ಕಾಂಬೋಡಿಯಾಗೆ ಹೋಗಿದ್ದಾರೆ, ಅಲ್ಲಿ ಏನು ಹೇಳುತ್ತಾರೋ ಎಂದು ಹೇಳಿದರು.

### ತರಬೇತಿಗಾಗಿ ಅರ್ಜಿ ಆಹ್ವಾನ

**ದಾವಣಗೆರೆ :** ಹೆಚ್.ಎ.ಎಲ್, ಬೆಂಗಳೂರು ವತಿಯಿಂದ ಐ.ಟಿ.ಐ. (ಫಿಟ್ಟರ್, ಟರ್ನರ್, ಮೆಷಿನಿಸ್ಟ್, ಎಲೆಕ್ಟ್ರೀಷಿಯನ್, ವೆಲ್ಡರ್, ಸಿ.ಒಪಿ.ಎ, ಫೌಂಡ್ರಿಮನ್ ಮತ್ತು ಶೀಟ್ ಮೆಟಲ್ ವರ್ಕರ್) ತೇರ್ಗಡೆ ಹೊಂದಿದ ಅಭ್ಯರ್ಥಿಗಳಿಂದ ಅಪ್ರೆಂಟೀಸ್ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ನಮೂನೆಯನ್ನು ಜಿಲ್ಲಾಡಳಿತ ಭವನ, 1ನೇ ಮಹಡಿಯಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಪಡೆದು, ಭರ್ತಿ ಮಾಡಿ, ಆಗಸ್ಟ್ 28 ರೊಳಗೆ ಭರ್ತಿ ಮಾಡಿದ ಅರ್ಜಿಯನ್ನು ಕಚೇರಿಗೆ ಸಲ್ಲಿಸಬೇಕು.

ಅಭ್ಯರ್ಥಿಗಳು ತಿತಿತಿ.ಚಿಠಿಠಿಡಿಜಟಿಣುಭಿಝುಠಿಟಿಜುಚಿ. ಠಡಿರ ವೆಬ್‌ಸೈಟ್‌ನಲ್ಲಿ ನೋಂದಾಯಿಸಿ, ಕಡ್ಡಾಯವಾಗಿ ನೋಂದಣಿ ಸಂಖ್ಯೆಯನ್ನು ತರಬೇಕು. ಹೆಚ್ಚಿನ ಮಾಹಿತಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಜಿಲ್ಲಾ ಆಡಳಿತ ಭವನ ದೂ.ಸಂ. 7406323294 ಸಂಪರ್ಕಿಸಲು ಜಿಲ್ಲಾ ಉದ್ಯೋಗಾಧಿಕಾರಿ ರವೀಂದ್ರ. ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪಡಿತರ ಆಹಾರ ಧಾನ್ಯ ಹಂಚಿಕೆ


**ದಾವಣಗೆರೆ :** ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜಿಲ್ಲೆಯಲ್ಲಿನ ಪಡಿತರ ಚೀಟಿದಾರರಿಗೆ ಆಗಸ್ಟ್ ಮಾಹೆಯಲ್ಲಿ ಬಿಡುಗಡೆಯಾದ ಪಡಿತರ ಆಹಾರ ಧಾನ್ಯವನ್ನು ಹಂಚಿಕೆ ಮಾಡಲಾಗಿದೆ.

ಅಂತ್ಯೋದಯ ಪಡಿತರ ಚೀಟಿದಾರರಿಗೆ 21 ಕೆ.ಜಿ ಅಕ್ಕಿ ಮತ್ತು ರಾಗಿ 14ಕೆ.ಜಿ ಪ್ರತಿ ಕಾರ್ಡಿಗೆ, ಆದ್ಯತಾ ಹಾಗೂ ಬಿ.ಪಿ.ಎಲ್ ಪಡಿತರ ಚೀಟಿದಾರರಿಗೆ 3ಕೆ.ಜಿ ಅಕ್ಕಿ ಮತ್ತು ಪ್ರತಿ ಸದಸ್ಯರಿಗೆ 2ಕೆ.ಜಿ ರಾಗಿ ಉಚಿತವಾಗಿ ವಿತರಿಸಲಾಗುತ್ತದೆ. ಹಾಗೂ ಪ್ರತಿ ಕೆ.ಜಿ ಗೆ ರೂ.15ರಂತೆ ಒಪ್ಪಿಗೆ ನೀಡಿದ ಎ.ಪಿ.ಎಲ್ ಏಕ ಸದಸ್ಯ ಪಡಿತರ ಚೀಟಿದಾರರಿಗೆ 5ಕೆ.ಜಿ, ಎರಡು ಮತ್ತು ಹೆಚ್ಚಿನ ಸದಸ್ಯರನ್ನು ಹೊಂದಿರುವವರಿಗೆ 10ಕೆ.ಜಿ ಅಕ್ಕಿಯನ್ನು ವಿತರಿಸಲಾಗುವುದು.

ಪಡಿತರ ಚೀಟಿಗಳಲ್ಲಿ ಎಸ್.ಸಿ, ಎಸ್.ಟಿ ಕುಟುಂಬದ ಮಾಹಿತಿಯನ್ನು ನವೀಕರಿಸಲು ಕಾರ್ಡುದಾರರು ತಮ್ಮ ಪಡಿತರ ಚೀಟಿಯ ಜೆರಾಕ್ಸ್ ಮತ್ತು ಂಎಖಿಂ ವತಿಯಿಂದ ನೀಡಲಾದ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯನ್ನು ನಿಮ್ಮ ನ್ಯಾಯ ಬೆಲೆ ಅಂಗಡಿಗೆ ನೀಡಬೇಕು ಎಂದು ದಾವಣಗೆರೆ ತಾಲ್ಲೂಕು ತಹಶೀಲ್ದಾರ್ ಡಾ. ಅಶ್ವತ್ ಎಂ.ಬಿ ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

**ದಾವಣಗೆರೆ :** 220/11ಕೆ.ವಿ ವಿದ್ಯುತ್ ಸ್ವೀಕರಣಾ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಆಗಸ್ಟ್ 10 ರಂದು ಬೆಳಗ್ಗೆ 10 ರಿಂದ ಸಂಜೆ 5ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.
ಎಸ್.ಆರ್.ಎಸ್ ಫೀಡರ್ ವ್ಯಾಪ್ತಿಯ ರಂಗನಾಥ ಬಡಾವಣೆ, ವಿದ್ಯಾನಗರ, ತರಳಬಾಳು ಬಡಾವಣೆ, ಗಾಂಧಿ ಮೂರ್ತಿ ವೃತ್ತದಿಂದ ಈಶ್ವರ ಪಾರ್ವತಿ ದೇವಸ್ಥಾನ, ಯು.ಬಿ.ಡಿ.ಟಿ ಲೇಡಿಸ್ ಹಾಸ್ಟೆಲ್, ಜಮುನಾ ವಾಣಿಜ್ಯ ಮಳಿಗೆ, ಸವಿತಾ ಹೋಟೆಲ್, ಸರಸ್ವತಿ ನಗರ, ಶಿವಕುಮಾರಸ್ವಾಮಿ ಬಡಾವಣೆ, ಶಿವಕುಮಾರಸ್ವಾಮಿ ಬಡಾವಣೆ 1 ಮತ್ತು 2ನೇ ಹಂತ, ಹದಡಿ ರಸ್ತೆ, ಸೇಂಟ್ ಜಾನ್ ಸ್ಕೂಲ್, ಐ.ಟಿ.ಐ. ಕಾಲೇಜು, ರಿಂಗ್‌ರಸ್ತೆ, ಶ್ರೀನಿವಾಸ ನಗರ, ಜಯನಗರ, ಭೂಮಿಕ ನಗರ, ಕೆ.ಎಸ್.ಎಸ ಕಾಲೇಜ್ ಸುತ್ತ ಮುತ್ತ, ಲೋಕಿಕೆರೆ ರಸ್ತೆ ಇಂಡಸ್ಟ್ರಿಯಲ್ ಏರಿಯಾ, ಎಸ್.ಎಸ್. ಆಸ್ಪತ್ರೆ ಸುತ್ತ ಮುತ್ತ, ಜಿಲ್ಲಾ ಪಂಚಾಯತ್ ಆಫೀಸ್, ಸರ್ಕ್ಯೂಟ್ ಹೌಸ್, ವಿವೇಕಾನಂದ ಬಡಾವಣೆ, ಸರಸ್ವತಿ ಬಡಾವಣೆ ಎ, ಬಿ ಮತ್ತು ಸಿ ಬ್ಲಾಕ್, ಜೀವನ್ ಭೀಮಾನಗರ, ಚಿಕ್ಕಮಣಿ ದೇವರಾಜ್ ಅರಸ್ ಬಡಾವಣೆ, ಜಯನಗರ ಎ,ಬಿ ಬ್ಲಾಕ್, ಸಾಯಿ ಬಾಬ ದೇವಸ್ಥಾನದ, ಲಕ್ಷ್ಮೀ ಬಡಾವಣೆ, ಲಕ್ಷ್ಮೀ ಬಡಾವಣೆ, ದೂರದರ್ಶನ ಕೇಂದ್ರ, ಮಹಾನಗರ ಪಾಲಿಕೆ ನೀರು ಸರಬರಾಜು ಘಟಕಗಳು, ಭೂಸೇನಾ ನಿಗಮ, ಸುಬ್ರಹ್ಮಣ್ಯ ನಗರ, ಎಸ್.ಎ.ರವೀಂದ್ರನಾಥ ಬಡಾವಣೆ, ಎಸ್.ಓ.ಜಿ ಕಾಲೋನಿ ಎ, ಬಿ, ಸಿ ಬ್ಲಾಕ್, ಬುದ್ದ, ಬಸವ ಭೀಮ ನಗರ, ಕರ್ನಾಟಕ ಬೀಜ ನಿಗಮ, ಎಲ್.ಐ.ಸಿ ಕಾಲೋನಿ, ಆಂಜನೇಯ ಬಡಾವಣೆ, ವಿನಾಯಕ ಬಡಾವಣೆ, ಶಾಮನೂರು, ಜೆ.ಹೆಚ್. ಪಟೇಲ್ ನಗರ, ಹೊಸ ಕುಂದವಾಡ, ಹಳೇ ಕುಂದವಾಡ, ಕೆ.ಎಚ್.ಬಿ. ಕಾಲೋನಿ, ಸಿ.ಎಂ.ಸಿ. ವಾಟರ್ ವರ್ಕ, ಪಾಮೇನಹಳ್ಳಿ, ಶಿರಮಗೊಂಡನಹಳ್ಳಿ, ಆರನೇ ಮೈಲಿ ಕಲ್ಲು, ಏಳನೇ ಮೈಲಿ ಕಲ್ಲು, ನಾಗನೂರು, ಬಿಸಲೇರಿ, ಬೆಳವನೂರು, ತುರ್ಚಗಟ್ಟ, ಜರಿಕಟ್ಟೆ, ಮುದಹದಡಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆಯಲ್ಲಿ ತಿಳಿಸಿದೆ.




ಬೆಂಗಳೂರು : ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತ ವತಿಯಿಂದ ಮುಖ್ಯಮಂತ್ರಿಯವರ ಪರಿಹಾರ ನಿಧಿಗೆ 5 ಕೋಟಿ ರೂ ಮೌಲ್ಯದ ಚೆಕ್ ನೀಡಲಾಯಿತು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚೆಕ್ ಸ್ವೀಕರಿಸಿದರು. ಡಿಸಿಎಂ ಡಿ.ಕೆ.ಶಿವಕುಮಾರ್ ಹಾಗೂ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಸೇರಿ ಹಲವರು ಉಪಸ್ಥಿತರಿದ್ದರು.

# ಅಬ್ಬೇನಹಳ್ಳಿ ಗ್ರಾ.ಪಂ. ಅಧ್ಯಕ್ಷರ ಆಯ್ಕೆ



**ನಾಯಕನಹಟ್ಟಿ :** ನಾಯಕನಹಟ್ಟಿ ಹೋಬಳಿಯ ಅಬ್ಬೇನಹಳ್ಳಿ ಗ್ರಾಮ ಪಂಚಾಯಿತಿಯ ಎರಡನೇ ಅವದಿಯ ಅಧ್ಯಕ್ಷರಾಗಿ ಪಾಪಮ್ಮ ಆನಂದಪ್ಪ ಮತ್ತು ಉಪಾಧ್ಯಕ್ಷರಾಗಿ ಅನಿತಾ ಜಯಣ್ಣ ಆಯ್ಕೆ–ಕೊಂಡಿದ್ದಾರೆ ಎಂದು ಚುನಾವಣೆ ಅಧಿಕಾರಿಯಾದ ಕೃಷಿ ಇಲಾಖೆಯ ತಾಲ್ಲೂಕು ಅಧಿಕಾರಿಯಾದ ಆಶೋಕ್ ಘೋಷಣೆ ಮಾಡಿದರು.
ನೂತನ ಅಧ್ಯಕ್ಷೆ ಉಪಾಧ್ಯಕ್ಷೆ ಮತ್ತು ಗ್ರಾಮಸ್ಥರು ಬಸವೇಶ್ವರ ದೇವಸ್ಥಾನ ಹಾಗೂ ತೋರೆಕೋಲಮ್ಮನಹಳ್ಳಿ ಗ್ರಾಮದಲ್ಲಿನ ದುರ್ಗಾಂಭಿಕ ದೇವಸ್ಥಾನಕ್ಕೆ ತೆರಳಿ ಪೂಜೆ ಸಲ್ಲಿಸಿದರು.

# 11 ಗ್ರಾ.ಪಂಗೆ 2ನೇ ಅವಧಿಗೆ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ



ಹೊಸದುರ್ಗ : ತಾಲೂಕಿನ 11 ಗ್ರಾಮ ಪಂಚಾಯಿತಿಗಳಿಗೆ 2ನೇ ಅವಧಿಗೆ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಆಯ್ಕೆ ಪ್ರಕ್ರಿಯೆ ಬುಧವಾರ ನಡೆಯಿತು. ದೊಡ್ಡಕಿಟ್ಟದಳ್ಳಿ ಗ್ರಾ.ಪಂ.ಅಧ್ಯಕ್ಷ ಸ್ಥಾನಕ್ಕೆ ಟಿ.ಎನ್.ತಿಪ್ಪೇಸ್ವಾಮಿ, ಉಪಾಧ್ಯಕ್ಷ ಸ್ಥಾನಕ್ಕೆ ಶಿವಮ್ಮ, ಲಕ್ಕಿಹಳ್ಳಿ ಗ್ರಾ.ಪಂ. ಅಧ್ಯಕ್ಷ ಸ್ಥಾನಕ್ಕೆ ಲಕ್ಷ್ಮೀದೇವಿ ಮುದ್ದಪ್ಪ, ಉಪಾಧ್ಯಕ್ಷ ಸ್ಥಾನಕ್ಕೆ ತಿಮ್ಮಪ್ಪ ಪಾತಪ್ಪ, ದೊಡ್ಡಘಟ್ಟ ಗ್ರಾ.ಪಂ. ಅಧ್ಯಕ್ಷ ಸ್ಥಾನಕ್ಕೆ ಲಕ್ಷ್ಮೀದೇವಮ್ಮ, ಉಪಾಧ್ಯಕ್ಷ ಸ್ಥಾನಕ್ಕೆ ಟಿ.ಜಿ. ತಿಮ್ಮೇಶ್, ಅತ್ತಿಮಗೆ ಗ್ರಾ.ಪಂ ಅಧ್ಯಕ್ಷ ಸ್ಥಾನಕ್ಕೆ ಅನುಸೂಯಮ್ಮ, ಉಪಾಧ್ಯಕ್ಷ ಸ್ಥಾನಕ್ಕೆ ಪಿ. ಜಯಶೀಲ, ಆನಿವಾಳ ಗ್ರಾ.ಪಂ. ಅಧ್ಯಕ್ಷ ಸ್ಥಾನಕ್ಕೆ ರಾಯಮ್ಮ, ಉಪಾಧ್ಯಕ್ಷ ಸ್ಥಾನಕ್ಕೆ ಮಂಜಮ್ಮ, ಹುಣವಿನಡು ಗ್ರಾ.ಪಂ. ಅಧ್ಯಕ್ಷ ಸ್ಥಾನಕ್ಕೆ ಎಸ್. ಸುನೀತಾ, ಉಪಾಧ್ಯಕ್ಷ ಸ್ಥಾನಕ್ಕೆ ಮಂಜಮ್ಮ, ಬೋಕಿಕೆರೆ ಗ್ರಾ.ಪಂ. ಅಧ್ಯಕ್ಷ ಸ್ಥಾನಕ್ಕೆ ಆರ್. ರಂಗಮ್ಮ, ಉಪಾಧ್ಯಕ್ಷ ಸ್ಥಾನಕ್ಕೆ ಯಶೋಧಮ್ಮ ಆಯ್ಕೆಯಾಗಿದ್ದಾರೆ.

ಮುತ್ತೋಡು ಗ್ರಾ.ಪಂ.ಅಧ್ಯಕ್ಷ ಸ್ಥಾನಕ್ಕೆ ಪರಮ್ಮ, ಉಪಾಧ್ಯಕ್ಷ ಸ್ಥಾನಕ್ಕೆ ರತ್ನಮ್ಮ, ಕಂಗುವಳ್ಳಿ ಗ್ರಾ.ಪಂ.ಅಧ್ಯಕ್ಷ ಸ್ಥಾನಕ್ಕೆ ಮಹೇಶ್ವರಪ್ಪ, ಉಪಾಧ್ಯಕ್ಷ ಸ್ಥಾನಕ್ಕೆ ಇಂದ್ರಮ್ಮ, ಕಂಚಿಪುರ ಗ್ರಾ.ಪಂ.ಅಧ್ಯಕ್ಷ ಸ್ಥಾನಕ್ಕೆ ವಾಣಿಶ್ರೀ, ಉಪಾಧ್ಯಕ್ಷ ಸ್ಥಾನಕ್ಕೆ ಪರಮೇಶ್ವರಪ್ಪ ಮತ್ತು ಕಬ್ಬಳ ಗ್ರಾ.ಪಂ.ಅಧ್ಯಕ್ಷ ಸ್ಥಾನಕ್ಕೆ ರವಿ ಎಂ.ಗಾರೆ, ಉಪಾಧ್ಯಕ್ಷ ಸ್ಥಾನಕ್ಕೆ ಲಕ್ಕಮ್ಮ ಆಯ್ಕೆಯಾಗಿದ್ದಾರೆ.

ದೊಡ್ಡಕಿಟ್ಟದಹಳ್ಳಿ ಮತ್ತು ಕಬ್ಬಳ ಗ್ರಾಮ ಪಂಚಾಯಿತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ಬಹುಮತದಿಂದ ಚುನಾವಣೆ ಪ್ರಕ್ರಿಯೆ ನಡೆದಿದ್ದು, ಇನ್ನೂ 9 ಗ್ರಾ.ಪಂ.ಗಳಲ್ಲಿ ಅವಿರೋಧವಾಗಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರನ್ನು ಆಯ್ಕೆ ಮಾಡಲಾಗಿದೆ ಎಂದು ತಹಶೀಲ್ದಾರ್ ಪಾಲಯ್ಯ ಮಾಹಿತಿ ನೀಡಿದ್ದಾರೆ.

# ಕೆಲಸದ ಅವಧಿಯ ಹೆಚ್ಚಳದ ಆದೇಶ ಹಿಂಪಡೆಯಿರಿ



**ಚಿತ್ರದುರ್ಗ :** ಕೇಂದ್ರ ಸರ್ಕಾರದ ಕಾರ್ಮಿಕ ಹಾಗೂ ರೈತ ವಿರೋಧಿ ನೀತಿಯನ್ನು ಖಂಡಿಸಿ ಸಿ.ಐ.ಟಿ.ಯು. ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಮಂಗಳವಾರ ಪ್ರತಿಭಟನೆ ನಡೆಸಿ ಜಿಲ್ಲಾಡಳಿತದ ಮೂಲಕ ಪ್ರಧಾನ ಮಂತ್ರಿಗೆ ಮನವಿ ಸಲ್ಲಿಸಲಾಯಿತು.

ಕೆಲಸದ ಅವಧಿಯನ್ನು ದಿನಕ್ಕೆ ಹನ್ನೆರಡು ಗಂಟೆಗಳಿಗೆ ಹೆಚ್ಚಿಸಿರುವುದನ್ನು ಹಿಂದಕ್ಕೆ ಪಡೆಯಬೇಕು. ಜೀವನಕ್ಕೆ ಯೋಗ್ಯವಾದ ಕನಿಷ್ಠ ವೇತನ ತಿಂಗಳಿಗೆ 31 ಸಾವಿರದ ಐದುನೂರು ರೂ.ಗಳನ್ನು ಘೋಷಿಸಬೇಕು. ಕಾರ್ಮಿಕ ವಿರೋಧಿ ಲೇಬರ್ ಕೋಡ್ ರದ್ದಾಗಲಿ. ಸಾರ್ವತ್ರಿಕ ಪಿಂಚಣಿ ವ್ಯವಸ್ಥೆ ಜಾರಿಗೊಳಿಸಿ ಕನಿಷ್ಠ ಎಂಟು ಸಾವಿರ ರೂ.ಪಿಂಚಣಿ ನೀಡಬೇಕು. ಉದ್ಯೋಗ ಖಾತ್ರಿ ಯೋಜನೆಯಡಿ ದುಡಿಯುವ ದಿನಗಳನ್ನು 200 ಕ್ಕೆ ಏರಿಸಿ ಸ್ಕೀಂ ಕಾರ್ಮಿಕರಾದ ಆಶಾ, ಅಂಗನವಾಡಿ ಮತ್ತು ಬಿಸಿಯೂಟ ಕಾರ್ಮಿಕರನ್ನು ಕನಿಷ್ಟ ವೇತನ ವ್ಯಾಪ್ತಿಗೆ ಒಳಪಡಿಸಿ. ವಲಸೆ ಕಾರ್ಮಿಕರಿಗೆ ಸೇವಾ ಭದ್ರತೆ ಮತ್ತು ಪಡಿತರ ವ್ಯವಸ್ಥೆ, ಜಾರಿಗೊಳಿಸಿ. ಕೃಷಿ ಉತ್ಪನ್ನಗಳಿಗೆ ಬೆಂಬಲ ಬೆಲೆ ನಿಗಧಿಪಡಿಸಿ ಜಿ.ಎಸ್.ಟಿ.ವ್ಯಾಪ್ತಿಯಿಂದ ಹೊರಗಿಡಬೇಕು. ವಿದ್ಯುತ್‌ಚ್ಛಕ್ತಿ ಮಸೂದೆ 2020 ಅನ್ನು ಹಿಂದಕ್ಕೆ ಪಡೆಯಬೇಕು. ಅಸಂಘಟಿತ ಹಮಾಲಿ ಕಾರ್ಮಿಕರಿಗೆ ನಿವೇಶನಗಳನ್ನು ಹಂಚಿಕೆ ಮಾಡಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಸಿ.ಐ.ಟಿ.ಯು. ಜಿಲ್ಲಾ ಸಂಚಾಲಕ ಟಿ.ತಿಪ್ಪೇಸ್ವಾಮಿ, ಸಹ ಸಂಚಾಲಕರುಗಳಾದ ಡಿ.ಎಂ.ಮಲಿಯಪ್ಪ, ಟಿ.ನಿಂಗಣ್ಣ, ನಿಂಗಮ್ಮ, ಈ.ನಾಗರಾಜು, ನಾಗರಾಜಚಾರಿ, ಬಿ.ಬೋರಮ್ಮ, ಹೆಚ್.ಓ.ನಾಗರಾಜ್, ಎಸ್.ರಾಜಣ್ಣ, ಶಶಿಕುಮಾರ್, ಶಿವಮ್ಮ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಪರಶುರಾಂಪುರ ಗ್ರಾ.ಪಂ.ಕಾಂಗ್ರೆಸ್ ತೆಕ್ಕೆಗೆ



**ಚಳ್ಳಕೆರೆ :** ತಾಲ್ಲೂಕಿನ ಅತಿ ಹೆಚ್ಚು ಗ್ರಾಮ ಪಂಚಾಯಿತಿ ಸದಸ್ಯರನ್ನು ಹೊಂದಿರುವ ಪರಶುರಾಮಪುರ ಗ್ರಾಮ ಪಂಚಾಯಿತಿಯ ಎರಡನೇ ಅವಧಿಯ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆ ಬುಧವಾರ ನಡೆದಿದ್ದು, ಅಧ್ಯಕ್ಷರಾಗಿ ಜಗಲೂರಸ್ವಾಮಿ, ಉಪಾಧ್ಯಕ್ಷರಾಗಿ ಸರೋಜಮ್ಮ ಅವಿರೋಧವಾಗಿ ಆಯ್ಕೆಯಾಗಿದ್ದಾರೆ–ಂದು ಚುನಾವಣಾಧಿಕಾರಿ, ಸಮಾಜ ಕಲ್ಯಾಣ ಇಲಾಖೆಯ ಮಂಜುನಾಥ ತಿಳಿಸಿದರು.

ನೂತನ ಅಧ್ಯಕ್ಷ ಜಗಲೂರಸ್ವಾಮಿ ಪತ್ರಿಕೆಯೊಂದಿಗೆ ಮಾತನಾಡಿ, ಪರಶುರಾಮಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಶಾಸಕ ಟಿ.ರಘುಮೂರ್ತಿಯವರ ಮಾರ್ಗದರ್ಶನ ಪಡೆದು ಸರ್ಕಾರದ ಹಲವಾರು ಯೋಜನೆಗಳನ್ನು ಜಾರಿಗೆ ತಂದು ಅಭಿವೃದ್ಧಿ ಕೆಲಸ ಮಾಡಲಾಗುತ್ತದೆ ಎಂದು ತಿಳಿಸಿದರು.

# ಅಸ್ವಸ್ಥರ ಯೋಗ–ಕ್ಷೇಮ ವಿಚಾರಿಸಿದ ಡಿಸಿ ದಿವ್ಯ ಪ್ರಭು

## ಗುಣಮುಖರ ಸಂಖ್ಯೆ ಹೆಚ್ಚಳ ಕವಾಡಿಗರಹಟ್ಟಿ ಜನರಲ್ಲಿನ ಆತಂಕ ದೂರ

**ಚಿತ್ರದುರ್ಗ :** ಕವಾಡಿಗರಹಟ್ಟಿಯಲ್ಲಿ ಕಲುಷಿತ ನೀರಿನಿಂದಾಗಿ ವಾಂತಿ–ಭೇದಿಯಿಂದ ಅಸ್ವಸ್ಥಗೊಂಡು ಆಸ್ಪತ್ರೆಗೆ ದಾಖಲಾಗಿದ್ದ ಬಹುತೇಕರು ಗುಣಮುಖರಾಗಿ, ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿ ಮನೆಗೆ ಮರಳುತ್ತಿದ್ದು, ಹೊಸದಾಗಿ ದಾಖಲಾಗುವವರ ಸಂಖ್ಯೆಯೂ ಇಳಿಮುಖಗೊಂಡಿದೆ, ಹೆಚ್ಚಿನ ಪರೀಕ್ಷೆಗಾಗಿ ಬೆಂಗಳೂರಿಗೆ ಕಳುಹಿಸಿಕೊಡಲಾಗಿದ್ದ ನೀರಿನ 03 ಮಾದರಿಗಳ ವರದಿ ಕೂಡ ಬಂದಿದ್ದು ನೀರಿನಲ್ಲಿ ಯಾವುದೇ ರಾಸಾಯನಿಕ ಅಂಶ ಕಂಡುಬಂದಿಲ್ಲ ಹೀಗಾಗಿ ಜನರಲ್ಲಿದ್ದ ಆತಂಕದ ಕಾರ್ಮೋಡ ಸರಿದಂತಾಗಿದೆ.

ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಅವರು ಚಿತ್ರದುರ್ಗ ನಗರದ ಕವಾಡಿಗರಹಟ್ಟಿಯ ವಾಂತಿಭೇದಿ ಪ್ರಕರಣ ಸಂಬಂಧ ಜಿಲ್ಲಾಸ್ಪತ್ರೆಗೆ ಭೇಟಿ ನೀಡಿ ಚಿಕಿತ್ಸೆ ಪಡೆಯುತ್ತಿರುವ ಅಸ್ವಸ್ಥರ ಯೋಗ–ಕ್ಷೇಮ, ಚಿಕಿತ್ಸೆ, ಆಹಾರ ಪೂರೈಕೆ ಕುರಿತು ವಿಚಾರಿಸಿದರು.

ಅಸ್ವಸ್ಥರು ಗುಣಮುಖರಾಗಿ ಮನೆಗೆ ತೆರಳುತ್ತಿದ್ದು , ಹೊಸದಾಗಿ ದಾಖಲಾಗುವವರ ಸಂಖ್ಯೆ ಇಳಿಮುಖಗೊಂಡಿದೆ. ಸಾರ್ವಜನಿಕರು ಕಾಯಿಸಿ,ಆರಿಸಿದ ನೀರನ್ನೇ ಉಪಯೋಗಿಸಬೇಕು, ಯಾವುದೇ ಆಹಾರ ಸೇವನೆಗೂ ಮುನ್ನ ಕೈ–ಕಾಲುಗಳನ್ನು ಸಾಬೂನಿನಿಂದ ಸ್ವಚ್ಛವಾಗಿ ತೊಳೆದುಕೊಳ್ಳಬೇಕು, ವೈಯಕ್ತಿಕ ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಮನವಿ ಮಾಡಿಕೊಂಡಿದ್ದಾರೆ.

ಡಿಹೆಚ್ ಓ ಡಾ. ಆರ್. ರಂಗನಾಥ್ ಅವರು ಮಾಹಿತಿ ನೀಡಿ ನೀರಿನ ಪರೀಕ್ಷೆಯಲ್ಲಿ ಕಾಲಾರಸ ಸೂಕ್ಷ್ಮಾಣು ಕಂಡು ಬಂದಿದೆ. ಹಾಗಾಗಿ ಕವಾಡಿಗರ ಹಟ್ಟಿಗೆ ಪ್ರತ್ಯೇಕವಾಗಿ ಶುದ್ಧ ನೀರು ಪೂರೈಕೆ ಮಾಡಲಾಗುತ್ತಿದ್ದು, ಬುಧವಾರದಂದು ಕೇವಲ 03 ಹೊಸ ಪ್ರಕರಣಗಳು ಮಾತ್ರ ದಾಖಲಾಗಿವೆ. ಅವರು ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ, ಬುಧವಾರದಂದು 18 ಜನ ಗುಣಮುಖರಾಗಿ



ತೆರಳಿದ್ದಾರೆ. ಪ್ರಸ್ತುತ 02 ಜನ ಜಿಲ್ಲಾಸ್ಪತ್ರೆ ಹಾಗೂ 31 ಜನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು ಗುಣಮುಖರಾಗುವ ಸಂಖ್ಯೆ ಹೆಚ್ಚಿದೆ. ಈವರೆಗೆ ಒಟ್ಟು 226 ಪ್ರಕರಣಗಳು ದಾಖಲಾಗಿ, 188 ಜನ ಗುಣಮುಖರಾಗಿದ್ದಾರೆ. ಕೆಲವು ಸಮಸ್ಯೆಯಿಂದಾಗಿ ಒಂದು ವಾರ್ಡ್‌ನ್ನು ತಾತ್ಕಾಲಿಕವಾಗಿ ಹೊಸದಾಗಿ ನಿರ್ಮಿಸಲಾಗಿರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆ ವಿಭಾಗ–ಕ್ಕೆ ಸ್ಥಳಾಂತರಿಸಲಾಗಿದೆ. ಮಕ್ಕಳಿಗಾಗಿ ಪ್ರತ್ಯೇಕ ಐಸಿಯು, ವಾರ್ಡ್ ಹಾಗೂ ದೊಡ್ಡವರಿಗೂ ಒಂದು ವಾರ್ಡ್ ವ್ಯವಸ್ಥೆ ಮಾಡಲಾಗಿದೆ. ಇದ–ಕ್ಕೆ ಅಗತ್ಯವಾದ ಸಿಬ್ಬಂದಿ ನಿಯೋಜನೆ ಹಾಗೂ ಔಷಧಿಗಳ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ ಎಂದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T